ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 137 | ರಾಯಚೂರು Raichur 08-11-2026 | ಭಾನುವಾರ Sunday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685



ಪ್ರಜಾಸೇವಾ ಆಂದೋಲನ ಕಾರ್ಯಕ್ರಮ

ಸರಕಾರಿ ಸೌಲಭ್ಯಗಳ ಸದ್ಬಳಕೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಸಾರ್ವಜನಿಕರಲ್ಲಿ ಮನವಿ

ರಾಯಚೂರು ನ. 07 (ಕರ್ನಾಟಕ ವಾರ್ತೆ): ಸರ್ಕಾರವೇ ಜನರ ಮನೆ ಬಾಗಿಲಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವ ವ್ಯವಸ್ಥೆಯನ್ನು ರೂಪಿಸಲಾಗಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಹೆಚ್ಚಿನ ಸಂಖ್ಯೆಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ನ. 07ರ ಶನಿವಾರ ದಂದು ಜಿಲ್ಲೆಯ ಅರಕೇರಾ ಪಟ್ಟಣದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ್ ಅರಕೇರಾ ಹಾಗೂ ವಿವಿಧ ಇಲಾಖೆಯಗಳ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಅವುಗಳನ್ನು ಪರಿಹರಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿರುವ ಪ್ರಜಾ ಸೇವೆ ಆಂದೋಲನ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಸಾರ್ವಜನಿಕರು ಜಿಲ್ಲಾ ಮಟ್ಟದ ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಲು, ಅಧಿಕಾರಿಗಳೇ ನೇರವಾಗಿ ಜನರ ಬಳಿಗೆ ತೆರಳಿ ಅವರ ಕುಂದುಕೊರತೆಗಳನ್ನು ಆಲಿಸಿ





ಸ್ಥಳದಲ್ಲೇ ಹಾಗೂ ಸಕಾಲದಲ್ಲಿ ಸಮಸ್ಯೆಗಳನ್ನು ಬಗೆಹರಿಸಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಹೆಚ್ಚಿನ ಸಂಖ್ಯೆಯಲ್ಲಿ ರೆವೆನ್ಯೂ ದಾಖಲೆಗಳಿಗೆ ಸಂಬಧಿಸಿದತೆ ದೇವದುರ್ಗ ಮತ್ತು ಅರಕೆರೆ ತಾಲೂಕಿಗೆ ಸಾರ್ವಜನಿಕರು ಅಲೆಯುತ್ತಿರುವ ಪರಿಸ್ಥಿತಿ ಹಾಗೂ ಈ ವರ್ಷ ತೀವ್ರ ಬರಗಾಲದ ಸಮಸ್ಯೆ ಇರುವುದರಿಂದ, ರೈತರು ಬಿತ್ತನೆ ಮಾಡಿರುವ ಬೆಳೆಗಳನ್ನು ಕಾಪಾಡಲು

2ನೇ ಪುಟಕ್ಕೆ

ಬೆಲೆ ಏರಿಕೆ ಖಂಡಿಸಿ ಭಿಕ್ಷಾಪಾತ್ರೆ ಹಿಡಿದು ಬಿಜೆಪಿ ಪ್ರತಿಭಟನೆ

ಜನಸಾಮಾನ್ಯರ ಬದುಕು ದುಸ್ತರಗೊಳಿಸಿದ ಕಾಂಗ್ರೆಸ್ ಸರ್ಕಾರ: ಶಾಸಕ ಡಾ. ಶಿವರಾಜ ಪಾಟೀಲ್ ಆಕ್ರೋಶ

ರಾಯಚೂರು: ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ, ಹಾಲಿನ ದರ, ಬಸ್ ಪ್ರಯಾಣ ದರ ಹಾಗೂ ವಿವಿಧ ಸರ್ಕಾರಿ ಸೇವೆಗಳ ಶುಲ್ಕ ಹೆಚ್ಚಳವನ್ನು ಖಂಡಿಸಿ ಭಾರತೀಯ ಜನತಾ ಪಕ್ಷದ ವತಿಯಿಂದ ಗುರುವಾರ ನಗರದಲ್ಲಿ ಭಿಕ್ಷಾಪಾತ್ರೆ ಹಿಡಿದು ವಿನೂತನ ಪ್ರತಿಭಟನೆ ನಡೆಸಲಾಯಿತು. ಜನಸಾಮಾನ್ಯರ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡುವುದರ ಜೊತೆಗೆ ಸಂಕಷ್ಟದಲ್ಲಿರುವ ರೈತರಿಗೆ ಸಮರ್ಪಕ ಪರಿಹಾರ ಒದಗಿಸುವಂತೆ ಪ್ರತಿಭಟನಾಕಾರರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಬಸ್ ನಿಲ್ದಾಣದವರೆಗೆ ಶಾಸಕ ಡಾ. ಶಿವರಾಜ ಪಾಟೀಲ್ ನೇತೃತ್ವದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಕೈಯಲ್ಲಿ ಭಿಕ್ಷಾಪಾತ್ರೆ ಹಿಡಿದು ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಘೋಷಣೆ ಕೂಗಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಶಾಸಕ ಡಾ. ಶಿವರಾಜ ಪಾಟೀಲ್, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ



ಅಧಿಕಾರಕ್ಕೆ ಬಂದ ನಂತರ ಜನಸಾಮಾನ್ಯರ ಜೀವನ ನಿರ್ವಹಣೆ ಕಷ್ಟಕರವಾಗಿದೆ. ಒಂದೆಡೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿದ್ದರೆ, ಮತ್ತೊಂದೆಡೆ ವಿವಿಧ ಸರ್ಕಾರಿ ಸೇವೆಗಳ ಶುಲ್ಕ ಹೆಚ್ಚಿಸುವ ಮೂಲಕ ಬಡವರು ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಹೇರಲಾಗುತ್ತಿದೆ ಎಂದು ಆರೋಪಿಸಿದರು.

ಹಾಲು, ಮೊಸರು, ತುಪ್ಪ, ಬಸ್ ಪ್ರಯಾಣ ದರ ಹಾಗೂ ವಿದ್ಯುತ್ ದರ ಹೆಚ್ಚಳದಿಂದ ಸಾರ್ವಜನಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರದ ಆರ್ಥಿಕ ನೀತಿಗಳಿಂದ ಜನರು ಭಿಕ್ಷೆ ಬೇಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಜನರ ಹಿತ ಕಾಪಾಡಬೇಕಾದ ಸರ್ಕಾರವೇ ಅವರನ್ನು ಆರ್ಥಿಕ ಸಂಕಷ್ಟಕ್ಕೆ ದೂಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಳೆ ಹಾಗೂ ಬೆಳೆ ಹಾನಿಯಿಂದ ತೊಂದರೆ ಅನುಭವಿಸುತ್ತಿರುವ ರೈತರಿಗೆ ಎಕರೆಗೆ ಕೇವಲ 2,500 ರೂ. ಪರಿಹಾರ ಘೋಷಿಸಿರುವುದು ರೈತರ ಸಂಕಷ್ಟಕ್ಕೆ ಸ್ಪಂದಿಸುವ ಕ್ರಮವಲ್ಲ. ಯೂರಿಯಾ ಸೇರಿದಂತೆ ಕೃಷಿ ಪರಿಕರಗಳ ಬೆಲೆ ಹೆಚ್ಚಾಗಿರುವ ಸಂದರ್ಭದಲ್ಲಿ ಸರ್ಕಾರ ನೀಡುತ್ತಿರುವ ಪರಿಹಾರ ಒಂದು ಚೀಲ ಗೊಬ್ಬರ ಖರೀದಿಸಲೂ ಸಾಕಾಗುವುದಿಲ್ಲ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸರ್ಕಾರದ ಪ್ರಮುಖರು ರೈತರ ವಾಸ್ತವ ಪರಿಸ್ಥಿತಿಯನ್ನು ಅರಿತುಕೊಳ್ಳಬೇಕು ಎಂದು ಆಗ್ರಹಿಸಿದರು.

ರಾಯಚೂರು ಭಾಗದ ರೈತರಿಗೆ ಮುಂಗಾರು ಮತ್ತು ಬೇಸಿಗೆ ಅವಧಿಯಲ್ಲಿಯೂ ಸಮರ್ಪಕ ನೀರಾವರಿ ಸೌಲಭ್ಯ ಕಲ್ಪಿಸಲಾಗಿಲ್ಲ. ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರು ಹಾಗೂ ವಿದ್ಯುತ್ ಪೂರೈಕೆಯಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸಿದೆ. ಇದರಿಂದ ರೈತರು ಬೆಳೆ ಉಳಿಸಿಕೊಳ್ಳಲು ಪರದಾಡುವಂತಾಗಿದೆ ಎಂದು ದೂರಿದರು.

ಅಂಗವಿಕಲರು, ವಿಧವೆಯರು ಹಾಗೂ ಇತರ ಅರ್ಹ ಫಲಾನುಭವಿಗಳಿಗೆ ಸಾಮಾಜಿಕ ಭದ್ರತಾ ಪಿಂಚಣಿ ಸಕಾಲಕ್ಕೆ ದೊರೆಯುತ್ತಿಲ್ಲ. ಯುವಕರಿಗೆ ಉದ್ಯೋಗಾವಕಾಶಗಳ ಕೊರತೆ ಎದುರಾಗಿದ್ದು, ಹೊರಗುತ್ತಿಗೆ ನೌಕರರು ಸೇರಿದಂತೆ ವಿವಿಧ ವರ್ಗಗಳ ಕಾರ್ಮಿಕರು ಅನಿಶ್ಚಿತತೆಯಲ್ಲಿ ಬದುಕುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ವಿದ್ಯಾನಿಧಿ ಯೋಜನೆಯಡಿ ನಿರೀಕ್ಷಿತ ನೆರವು ದೊರೆಯುತ್ತಿಲ್ಲ ಎಂದು ಆರೋಪಿಸಿದರು.

ಜನನ ಮತ್ತು ಮರಣ

2ನೇ ಪುಟಕ್ಕೆ

ಕೋಟೆ, ರಾಜಕಾಲುವೆ ಜಾಗದ ಅತಿಕ್ರಮಣ ತೆರವಿಗೆ ಆಗ್ರಹ: ಅಮರೇಗೌಡ ಪಾಟೀಲ್ ಪುರಾತತ್ವ ಇಲಾಖೆಗೆ ಸೇರಿದ ಜಾಗಗಳ ಸಂರಕ್ಷಣೆಗೆ ಕ್ರಮ ಕೈಗೊಳ್ಳದಿದ್ದರೆ ಕಾನೂನು ಹೋರಾಟದ ಎಚ್ಚರಿಕೆ

ರಾಯಚೂರು: ನಗರದ ಐತಿಹಾಸಿಕ ಕೋಟೆ, ರಾಜಕಾಲುವೆ, ಕಂದಕಗಳು ಹಾಗೂ ಪುರಾತತ್ವ ಇಲಾಖೆಗೆ ಸಂಬಂಧಿಸಿದ ಸಾರ್ವಜನಿಕ ಆಸ್ತಿಗಳನ್ನು ಖಾಸಗಿ ವ್ಯಕ್ತಿಗಳು ಅಕ್ರಮವಾಗಿ ಅತಿಕ್ರಮಿಸಿಕೊಂಡಿದ್ದು, ಇಂತಹ ಜಾಗಗಳನ್ನು ಗುರುತಿಸಿ ಸಂರಕ್ಷಿಸಲು ಜಿಲ್ಲಾಡಳಿತ ಕೂಡಲೇ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಜಿಲ್ಲಾಡಳಿತದ ವಿರುದ್ಧ ಹೋರಾಟ ನಡೆಸುವುದರ ಜೊತೆಗೆ ನ್ಯಾಯಾಲಯದ ಮೊರೆ ಹೋಗಲಾಗುವುದು ಎಂದು ರಾಯಚೂರು ಜಿಲ್ಲಾ ನಾಗರಿಕ ಸಮಿತಿಯ ಪ್ರಧಾನ ಸಂಚಾಲಕ ಅಮರೇಗೌಡ ಪಾಟೀಲ್ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸಮಿತಿಯ ಸಂಚಾಲಕ ಶ್ರೀನಿವಾಸ ಕಲವಲದೊಡ್ಡಿ ಅವರೊಂದಿಗೆ ಮಾತನಾಡಿದ ಅವರು, ನಗರದ ಅಂಬೇಡ್ಕರ್



ವೃತ್ತದ ಎದುರಿನ ಕೋಟೆ ರಾಜಕಾಲುವೆಗೆ ಹೊಂದಿಕೊಂಡಿರುವ ಸರ್ವೆ ನಂ.1498ರ 1 ಎಕರೆ 23 ಗುಂಟೆ ವಿಸ್ತೀರ್ಣದ ಜಾಗ ಸೇರಿದಂತೆ ನಗರದ ವಿವಿಧ ಭಾಗಗಳಲ್ಲಿರುವ ಐತಿಹಾಸಿಕ ಸ್ಥಳಗಳು, ಕಂದಕಗಳು, ಕೆರೆಗಳು ಹಾಗೂ ಗುಡ್ಡ ಪ್ರದೇಶಗಳು ಸಾರ್ವಜನಿಕ ಆಸ್ತಿಗಳಾಗಿವೆ. ಇವುಗಳಲ್ಲಿ ಪುರಾತತ್ವ ಇಲಾಖೆಗೆ ಸಂಬಂಧಿಸಿದ ಜಾಗಗಳನ್ನು ಖಾಸಗಿ ವ್ಯಕ್ತಿಗಳು ಕಂದಾಯ ದಾಖಲೆಗಳಲ್ಲಿ ತಮ್ಮ ಹೆಸರಿಗೆ ನಮೂದಿಸಿಕೊಂಡಿರುವ ಬಗ್ಗೆ ಗಂಭೀರ ಅನುಮಾನಗಳಿವೆ ಎಂದು ಆರೋಪಿಸಿದರು.

ಐತಿಹಾಸಿಕ ಕೋಟೆಗಳಿಗೆ ಹೊಂದಿಕೊಂಡಿರುವ ಕಂದಕಗಳು ಹಾಗೂ ಇತರ ಪ್ರದೇಶಗಳು ಯಾವುದೇ ಕಾಲದಲ್ಲಿಯೂ ಕೃಷಿ ಭೂಮಿಯಾಗಿರಲಿಲ್ಲ. ಆದರೂ ಕೆಲವು ವ್ಯಕ್ತಿಗಳು ಕಂದಾಯ ಇಲಾಖೆಯ ಪಹಣಿ ಮತ್ತು ಇತರ ದಾಖಲೆಗಳಲ್ಲಿ ಇಂತಹ ಜಾಗಗಳನ್ನು ಕೃಷಿ ಭೂಮಿ ಎಂದು ತಪ್ಪಾಗಿ ದಾಖಲಿಸಿಕೊಂಡು ಮಾಲೀಕತ್ವ ಸಾಧಿಸಲು ಪ್ರಯತ್ನಿಸಿದ್ದಾರೆ. ಸರ್ಕಾರಿ ಹಾಗೂ ಸಾರ್ವಜನಿಕ ಆಸ್ತಿಗಳನ್ನು ಮೋಸದ ಮೂಲಕ ಖಾಸಗಿ ಆಸ್ತಿಗಳನ್ನಾಗಿ

2ನೇ ಪುಟಕ್ಕೆ

₹7.05 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ದದ್ದಲ್ ಭೂಮಿಪೂಜೆ

ರಾಯಚೂರು: ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸುವ ಹಾಗೂ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರು ಮೀರಾಪುರ ಗ್ರಾಮದಲ್ಲಿ ಒಟ್ಟು ₹7.05 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಪ್ರಗತಿಪಥ ಯೋಜನೆಯಡಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ (ಪಿಎಂಜಿಎಸ್‌ವೈ) ಮೂಲಕ ಮೀರಾಪುರದಿಂದ ಇಡಪನೂರು ಗ್ರಾಮದವರೆಗೆ ₹2.55 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಬಿಟಿ (ಡಾಂಬರು) ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಈ ರಸ್ತೆ ನಿರ್ಮಾಣದಿಂದ ಮೀರಾಪುರ, ಇಡಪನೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ.

ಇದೇ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ



ಪ್ರದೇಶ ಅಭಿವೃದ್ಧಿ ಮಂಡಳಿಯ (ಕೆಕೆಆರ್‌ಡಿಬಿ) ಮ್ಯಾಕ್ರೋ ಯೋಜನೆಯಡಿ ₹4.50 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿರುವ ಸಿಸಿ ರಸ್ತೆ, ಸೇತುವೆ ಹಾಗೂ ಇಡಪನೂರಿನಿಂದ ಗುಂಜಳ್ಳಿ ಗ್ರಾಮದವರೆಗೆ ಬಿಟಿ ರಸ್ತೆ ನಿರ್ಮಾಣ ಕಾಮಗಾರಿಗಳಿಗೂ ಶಾಸಕರು ಭೂಮಿಪೂಜೆ ನೆರವೇರಿಸಿದರು.

ಗ್ರಾಮೀಣ ಭಾಗದ ರಸ್ತೆ ಹಾಗೂ ಸೇತುವೆಗಳ ಅಭಿವೃದ್ಧಿಯಿಂದ ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು, ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ತೆರಳಲು ಹಾಗೂ ಸಾರ್ವಜನಿಕರು ವಿವಿಧ ಅಗತ್ಯ ಸೇವೆಗಳನ್ನು ಪಡೆಯಲು ಅನುಕೂಲವಾಗಲಿದೆ. ಗ್ರಾಮಗಳ ನಡುವಿನ ಸಂಪರ್ಕ ವ್ಯವಸ್ಥೆ ಸುಧಾರಣೆಯೊಂದಿಗೆ ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೂ ಉತ್ತೇಜನ ದೊರೆಯುವ ನಿರೀಕ್ಷೆಯಿದೆ.

ಈ ಅಭಿವೃದ್ಧಿ

2ನೇ ಪುಟಕ್ಕೆ

ಸ್ವಾಮಿನಾಥನ್ ಆಯೋಗದ ಶಿಫಾರಸು ಜಾರಿಗೆ ಎರಡು ತಿಂಗಳ ಗಡುವು: ಶರಣಪ್ಪ ಮರಳಿ ಸುಲ್ತಾನಪುರ

ರಾಯಚೂರು: ರೈತರು ಉತ್ಪಾದಿಸುವ ಎಲ್ಲ ಕೃಷಿ ಬೆಳೆಗಳಿಗೆ ಸ್ವಾಮಿನಾಥನ್ ಆಯೋಗದ ಶಿಫಾರಸಿನಂತೆ ಸಮಗ್ರ ಉತ್ಪಾದನಾ ವೆಚ್ಚದ ಮೇಲೆ ಶೇ.50ರಷ್ಟು ಲಾಭಾಂಶ ಸೇರಿಸಿ ವೈಜ್ಞಾನಿಕ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಬೇಕು. ಬೆಂಬಲ ಬೆಲೆಗಿಂತ ಕಡಿಮೆ ದರದಲ್ಲಿ ಕೃಷಿ ಉತ್ಪನ್ನಗಳನ್ನು ಖರೀದಿಸುವುದನ್ನು ತಡೆಯಲು ಕಠಿಣ ಕಾನೂನು ರೂಪಿಸಬೇಕು. ಈ ಸಂಬಂಧ ಕೇಂದ್ರ ಸರ್ಕಾರ ಎರಡು ತಿಂಗಳೊಳಗೆ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ದೇಶಾದ್ಯಂತ ರೈತರನ್ನು ಸಂಘಟಿಸಿ ಬೃಹತ್ ಹೋರಾಟ ನಡೆಸಲಾಗುವುದು ಎಂದು ಎಂ.ಎಸ್. ಸ್ವಾಮಿನಾಥನ್ ಆಯೋಗದ ವರದಿ ಜಾರಿ ಹೋರಾಟ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣಪ್ಪ ಮರಳಿ ಸುಲ್ತಾನಪುರ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ



ಅವರು, ದೇಶದ ಆಹಾರ ಭದ್ರತೆಯನ್ನು ಖಾತ್ರಿಪಡಿಸುವಲ್ಲಿ ರೈತರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಆದರೆ, ದೇಶಕ್ಕೆ ಅನ್ನ ನೀಡುವ ರೈತರೇ ಇಂದು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಉತ್ಪಾದನಾ ವೆಚ್ಚ ನಿರಂತರವಾಗಿ ಹೆಚ್ಚಾಗುತ್ತಿದ್ದರೂ ಬೆಳೆಗಳಿಗೆ ನ್ಯಾಯಯುತ ಬೆಲೆ ದೊರೆಯದಿರುವುದು ರೈತರ ದುಸ್ಥಿತಿಗೆ ಪ್ರಮುಖ ಕಾರಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇಶದಲ್ಲಿ ಆಹಾರ ಉತ್ಪಾದನೆ ಹೆಚ್ಚಿಸುವ ಉದ್ದೇಶದಿಂದ ಹಸಿರು ಕ್ರಾಂತಿಗೆ ಒತ್ತು ನೀಡಲಾಯಿತು. ಇದರ ಪರಿಣಾಮ ಆಹಾರ ಧಾನ್ಯಗಳ ಉತ್ಪಾದನೆಯಲ್ಲಿ ಗಣನೀಯ ಪ್ರಗತಿ ಸಾಧಿಸಿದರೂ ರಾಸಾಯನಿಕ ಗೊಬ್ಬರ, ಕೀಟನಾಶಕ, ಬಿತ್ತನೆ ಬೀಜ, ಕೃಷಿ ಯಂತ್ರೋಪಕರಣ ಹಾಗೂ ಕೂಲಿ ವೆಚ್ಚ ಹೆಚ್ಚಳದಿಂದ ಕೃಷಿ ದುಬಾರಿಯಾಗಿದೆ. ರೈತರು ಬೆಳೆದ ಉತ್ಪನ್ನಗಳಿಗೆ ಉತ್ಪಾದನಾ ವೆಚ್ಚಕ್ಕೆ ಅನುಗುಣವಾದ ಬೆಲೆ ದೊರೆಯದಿರುವುದರಿಂದ ಸಾಲದ ಸುಳಿಗೆ ಸಿಲುಕುವಂತಾಗಿದೆ ಎಂದು ಹೇಳಿದರು.

ಪ್ರಸ್ತುತ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸುವ ವ್ಯವಸ್ಥೆಯು ರೈತರ ನೈಜ ಉತ್ಪಾದನಾ ವೆಚ್ಚವನ್ನು ಸಮರ್ಪಕವಾಗಿ ಪ್ರತಿಬಿಂಬಿಸುತ್ತಿಲ್ಲ. ಕೃಷಿ ವೆಚ್ಚ ಮತ್ತು ಬೆಲೆ ಆಯೋಗದ (ಸಿಎಸಿಪಿ) ಶಿಫಾರಸುಗಳ ಜೊತೆಗೆ ಸ್ವಾಮಿನಾಥನ್ ಆಯೋಗದ ತತ್ವಗಳನ್ನು ಪರಿಗಣಿಸಿ ಎಲ್ಲ

2ನೇ ಪುಟಕ್ಕೆ

ದಲಿತ ಮುಖಂಡರ ಹತ್ಯೆ, ಅತ್ಯಾಚಾರ ಪ್ರಕರಣಗಳ ಸಿಐಡಿ ತನಿಖೆಗೆ ಒತ್ತಾಯ

ರಾಯಚೂರು: ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ದಲಿತ ಮುಖಂಡ ಭೂಮಾನಂದ ಅವರ ಹತ್ಯೆ ಹಾಗೂ ಅಶ್ವಿನಿ ಒಕ್ರಾಣಿ ಮತ್ತು ರಾಣಮ್ಮ ಕರಡಕಲ್ ಅವರ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳ ತನಿಖೆಯನ್ನು ಅಪರಾಧ ತನಿಖಾ ಇಲಾಖೆಗೆ (ಸಿಐಡಿ) ಹಸ್ತಾಂತರಿಸಬೇಕು. ಆದರೆ, ರಾಜಕೀಯ ಒತ್ತಡಕ್ಕೆ ಮಣಿದಿರುವ ಗೃಹ ಸಚಿವರು ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಹಿಂದೇಟು ಹಾಕುತ್ತಿದ್ದಾರೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ಮಾರ್ಗ) ರಾಜ್ಯ ಸಮಿತಿಯ ರಾಜ್ಯ ಸಂಚಾಲಕ ಡಾ. ಆರ್. ಮೋಹನರಾಜ್ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ದಲಿತ ಸಮುದಾಯದವರ ಮೇಲೆ ನಡೆಯುತ್ತಿರುವ ಕೊಲೆ, ಅತ್ಯಾಚಾರ ಹಾಗೂ ದೌರ್ಜನ್ಯ ಪ್ರಕರಣಗಳು ಗಂಭೀರ ಸ್ವರೂಪ ಪಡೆದುಕೊಂಡಿವೆ. ಇಂತಹ ಘಟನೆಗಳು ನಿರಂತರವಾಗಿ ವರದಿಯಾಗುತ್ತಿದ್ದರೂ



ತಪ್ಪಿತಸ್ಥರ ವಿರುದ್ಧ ಪರಿಣಾಮಕಾರಿ ಕ್ರಮ ಕೈಗೊಳ್ಳುವಲ್ಲಿ ಆಡಳಿತ ವ್ಯವಸ್ಥೆ ವಿಫಲವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ ಆಗಸ್ಟ್ ತಿಂಗಳಲ್ಲಿ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ದಲಿತ ಬಹುಜನ ಮುಖಂಡ ಭೂಮಾನಂದ ಅವರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಅದೇ ರೀತಿ ಅಶ್ವಿನಿ ಒಕ್ರಾಣಿ ಹಾಗೂ ರಾಣಮ್ಮ ಕರಡಕಲ್ ಅವರ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿರುವ ಪ್ರಕರಣಗಳು ಜಿಲ್ಲೆಯ ಜನತೆಯನ್ನು ಬೆಚ್ಚಿಬೀಳಿಸಿವೆ. ಈ ಘಟನೆಗಳ ಹಿಂದಿರುವ ನೈಜ ಕಾರಣಗಳು, ಆರೋಪಿಗಳ ಪಾತ್ರ ಹಾಗೂ ಪ್ರಕರಣಗಳಿಗೆ ಸಂಬಂಧಿಸಿದ ಎಲ್ಲ ಅಂಶಗಳನ್ನು ನಿಷ್ಪಕ್ಷಪಾತವಾಗಿ ತನಿಖೆ ನಡೆಸುವ ಅಗತ್ಯವಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ದಲಿತ ಸಮುದಾಯವು ಜನಸಂಖ್ಯೆಯ ದೃಷ್ಟಿಯಿಂದ ಎರಡನೇ ಅತಿ ದೊಡ್ಡ ಸಮುದಾಯವಾಗಿದ್ದರೂ ಅದರ ಸದಸ್ಯರಿಗೆ ಸೂಕ್ತ ಭದ್ರತೆ ಹಾಗೂ ನ್ಯಾಯ ದೊರೆಯುತ್ತಿಲ್ಲ. ದೌರ್ಜನ್ಯ ಪ್ರಕರಣಗಳು ಮರುಕಳಿಸುತ್ತಿರುವುದು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯ ಕಾರ್ಯವೈಖರಿಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಟೀಕಿಸಿದರು.

ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಒದಗಿಸುವುದರ ಜೊತೆಗೆ ಪ್ರಕರಣಗಳ ಹಿಂದಿರುವ ಸತ್ಯಾಂಶಗಳನ್ನು ಸಾರ್ವಜನಿಕರ ಮುಂದೆ ತರಬೇಕಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಯಾವುದೇ ರಾಜಕೀಯ ಪ್ರಭಾವಕ್ಕೆ ಒಳಗಾಗದೆ

2ನೇ ಪುಟಕ್ಕೆ

ಪರಿಸರ ಸ್ನೇಹಿ ದೀಪಾವಳಿ ಆಚರಣೆ ಕುರಿತು ಜಾಗೃತಿ ಕಾರ್ಯಕ್ರಮ ಆಯೋಜನೆ

ರಾಯಚೂರು. ನ.7.(ಕರ್ನಾಟಕ ವಾರ್ತೆ):- ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ ರಾಯಚೂರು ಹಾಗೂ ಮುನ್ನೂರುಕಾಪು ಶಿಕ್ಷಣ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ‘‘ದೀಪಾವಳಿ ಹಬ್ಬವನ್ನು ಬೆಳಕಿನ ಹಬ್ಬವಾಗಿ ಮತ್ತು ಪರಿಸರ ಸ್ನೇಹಿಯಾಗಿ ಆಚರಣೆ’’ ಕುರಿತು 07.ನವೆಂಬ.ರ್2026 ರಂದು ಮುನ್ನೂರುಕಾಪು ಶಿಕ್ಷಣ ಸಂಸ್ಥೆಯಲ್ಲಿ ವಿಶೇಷವಾಗಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಪರಿಸರ ಅಧಿಕಾರಿಗಳಾದ ಬಿ.ಕೆ. ಸಂತೋಷ್ ಅವರು, ಈ ಬಾರಿಯ ದೀಪಾವಳಿಯನ್ನು ಆದಷ್ಟು ದೀಪಗಳನ್ನು ಬೆಳಗಿಸುವ ಮೂಲಕ ಮಾಲಿನ್ಯರಹಿತವಾಗಿ ಆಚರಿಸಬೇಕು. ನಿಷೇಧಿತ ಪಟಾಕಿಗಳನ್ನು ಸಿಡಿಸುವುದರಿಂದ ಶಬ್ದ, ವಾಯು ಹಾಗೂ ಘನತ್ಯಾಜ್ಯ ಉತ್ಪಾದನೆಯಾಗಿ ಪರಿಸರ ಮಾಲಿನ್ಯ ಹೆಚ್ಚಾಗುತ್ತದೆ. ಹಸಿರು ಪಟಾಕಿಗಳನ್ನು ಮಾತ್ರ ಬಳಸಬೇಕು ಮತ್ತು ಅವುಗಳನ್ನು ಬಳಸುವಾಗ ಪ್ರಾಣಿ-ಪಕ್ಷಿಗಳು, ಮಕ್ಕಳು ಹಾಗೂ ವೃದ್ಧರಿಗೆ ತೊಂದರೆಯಾಗದತೆ ಎಚ್ಚರಿಕೆ ವಹಿಸಬೇಕು ಎಂದರು.

ಆಸ್ಪತ್ರೆಗಳು, ಶಿಕ್ಷಣ ಸಂಸ್ಥೆಗಳ ಹಾಸ್ಟೆಲ್‌ಗಳು, ವೃದ್ಧಾಶ್ರಮಗಳು ಹಾಗೂ ಇತರ ನಿಷೇಧಿತ ಪ್ರದೇಶಗಳಲ್ಲಿ ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಪಟಾಕಿ ಹೊಗೆಯಿಂದ ಅಸ್ತಮಾ ರೋಗಿಗಳು, ಹೃದ್ರೋಗಿಗಳು ಹಾಗೂ ಚಿಕ್ಕ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟುಮಾಡುತ್ತದೆ. ರಾಷ್ಟ್ರೀಯ ಹಸಿರು ಪ್ರಾಧಿಕಾರ ಹಾಗೂ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ಸಿ.ಎಸ್.ಐ.ಆರ್. (AS) ಮತ್ತು ನೀರಿ (KCCS) ಲಾಂಛನ ಹಾಗೂ ಕ್ಯೂಆರ್ ಕೋಡ್ ಹೊಂದಿರುವ ಹಸಿರು ಪಟಾಕಿಗಳನ್ನು ಮಾತ್ರ ಉಪಯೋಗಿಸಬೇಕು. ರಾತ್ರಿ 8:00 ಗಂಟೆಯಿದ 10:00 ಗಂಟೆಯವರೆಗೆ ಮಾತ್ರ ಪಟಾಕಿ ಸಿಡಿಸಲು ಅವಕಾಶವಿದ್ದು, ರಾತ್ರಿ 10:00 ನಂತರ ಪಟಾಕಿ ಸಿಡಿಸಬಾರದು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಮಾಲಿನ್ಯ ನಿಯಂತ್ರಣ ಮಂಡಳಿಯ ವೈಜ್ಞಾನಿಕ ಸಹಾಯಕ ಪ್ರವೀಣ್ ಕುಮಾರ್ ಅವರು ಮಾತನಾಡಿ, ದೀಪಾವಳಿಯು ಸಂತೋಷ ಹಾಗೂ ಸೌಹಾರ್ದತೆಯ ಸಂಕೇತವಾಗಿದ್ದರೂ, ಪಟಾಕಿಗಳಿಂದ ವಾತಾವರಣಕ್ಕೆ ಬಿಡುಗಡೆಯಾಗುವ ಹಾನಿಕಾರಕ ಅನಿಲಗಳ ಕುರಿತು ಮಾಹಿತಿ ನೀಡಿ. ಪಟಾಕಿಯಿಂದ ಬಿಡುಗಡೆಯಾಗುವ ಸಲ್ಫರ್ ಡೈಆಕ್ಸೈಡ್ (L) ಉಸಿರಾಟದ ತೊಂದರೆ, ಕೆಮ್ಮು ಮತ್ತು ಗಂಟಲಿನ ಕಿರಿಕಿರಿ ಉಂಟುಮಾಡುತ್ತದೆ ಹಾಗೂ ನೈಟ್ರೋಜನ್ ಡೈಆಕ್ಸೈಡ್ (KL) ಶ್ವಾಸಕೋಶದ ಮೇಲೆ ದುಷ್ಪರಿಣಾಮ ಬೀರುತ್ತದೆ. ಇದರೊಂದಿಗೆ ಒ2.5 ಹಾಗೂ ಒ10 ಸೂಕ್ಷ್ಮ ಧೂಳಿನ ಕಣಗಳು ಗಾಳಿಯಲ್ಲಿ ಹೆಚ್ಚಾಗಿ ಮಕ್ಕಳು, ವೃದ್ಧರು ಹಾಗೂ ಅಸ್ತಮಾ ರೋಗಿಗಳಿಗೆ ತೊಂದರೆ ಉಂಟುಮಾಡುತ್ತವೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಮುನ್ನೂರುಕಾಪು ಶಿಕ್ಷಣ ಸಂಸ್ಥೆಯ ಮುಖ್ಯ ಶಿಕ್ಷಕರಾದ ಉಮಾದೇವಿ, ದೈಹಿಕ ಶಿಕ್ಷಕರಾದ ರವಿ ಕುಮಾರ್ ಹಾಗೂ ಗಂಗಾಧರ, ಮಾಲಿನ್ಯ ನಿಯಂತ್ರಣ ಮಂಡಳಿಯ ವೈಜ್ಞಾನಿಕ ಸಹಾಯಕ ಪ್ರವೀಣ್ ಕುಮ್ಾ,ರ್ ಕ್ಷೇತ್ರ ಸಹಾಯಕ ಮಲ್ಲಿಕಾರ್ಜುನ ಸೇರಿದಂತೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ಸಿರವಾರ ಉಪನೋಂದಣಿ ಕಚೇರಿ ವ್ಯಾಪ್ತಿಯ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆ ಪರಿಷ್ಕರಣೆ: ಆಕ್ಷೇಪಣೆಗೆ 15 ದಿನಗಳ ಕಾಲಾವಕಾಶ

ರಾಯಚೂರು. ನ.7.(ಕರ್ನಾಟಕ ವಾರ್ತೆ):-2026-27ನೇ ಸಾಲಿಗೆ ಸಿರವಾರ ಉಪನೋಂದಣಿ ಕಚೇರಿಯ ವ್ಯಾಪ್ತಿಗೆ ಬರುವ ನಗರ, ಪಟ್ಟಣ ಹಾಗೂ ಗ್ರಾಮಾಂತರ ಪ್ರದೇಶಗಳ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಯನ್ನು ಪರಿಷ್ಕರಿಸಲಾಗಿದೆ.

ಅಧ್ಯಕ್ಷರು ಹಾಗೂ ಸಿರವಾರ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ 06.ನವೆಂಬ.ರ್2026ರದು ನಡೆದ ಸಿರವಾರ ತಾಲೂಕು ಸ್ಥಿರಾಸ್ತಿಗಳ ಮಾರುಕಟ್ಟೆ ಮೌಲ್ಯ ನಿರ್ಧಾರಣಾ ಉಪಸಮಿತಿ ಸಭೆಯಲ್ಲಿ ನೀಡಿದ ನಿರ್ದೇಶನದಂತೆ ಈ ಮಾರ್ಗಸೂಚಿ ಬೆಲೆಗಳನ್ನು ಪರಿಷ್ಕರಿಸಲಾಗಿದೆ. ಸಾರ್ವಜನಿಕರ ಮಾಹಿತಿ ಹಾಗೂ ಆಕ್ಷೇಪಣೆಗಾಗಿ ಈ ಬೆಲೆ ಪಟ್ಟಿಯ ಕರಡು ಪ್ರತಿಯನ್ನು ಸಿರವಾರ ಉಪನೋಂದಣಿ ಕಚೇರಿಯಲ್ಲಿ ಪ್ರಚುರಪಡಿಸಲಾಗಿದೆ.

ಪರಿಷ್ಕೃತ ಮಾರ್ಗಸೂಚಿ ಬೆಲೆಗಳ ಬಗ್ಗೆ ಸಾರ್ವಜನಿಕರಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ಪ್ರಚುರಪಡಿಸಿದ 15 ದಿನಗಳ ಕಾಲಾವಕಾಶದೊಳಗೆ ಉಪನೋಂದಣಿ ಅಧಿಕಾರಿಗಳಿಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಉಪನೋಂದಣಿ ಅಧಿಕಾರಿ ಹಾಗೂ ತಾಲೂಕು ಸ್ಥಿರಾಸ್ತಿಗಳ ಮೌಲ್ಯ ನಿರ್ಧಾರಣಾ ಉಪಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ

ಇತರರ ಬದುಕಿಗೆ ಬೆಳಕಾಗುವುದಕ್ಕಿಂತ ದೊಡ್ಡ ಸಾಧನೆ ಇನ್ನೊಂದಿಲ್ಲ.

1641 ನೇಯ ದಿನಕ್ಕೆ ಏಮ್ಸ್ ಹೋರಾಟ

अखिल भारतीय आयुर्विज्ञान संस्थान
ALL INDIA INSTITUTE OF MEDICAL SCIENCES
शरीरमाद्यं खलु धर्मसाधनम्

ಅಮರೇಗೌಡ ಪಾಟೀಲ್ ಪುರಾತತ್ವ ಇಲಾಖೆಗೆ ಸೇರಿದ ಜಾಗಗಳ ಸಂರಕ್ಷಣೆಗೆ ಕ್ರಮ ಕೈಗೊಳ್ಳದಿದ್ದರೆ ಕಾನೂನು ಹೋರಾಟದ ಎಚ್ಚರಿಕೆ

ಪರಿವರ್ತಿಸುವ ಪ್ರಯತ್ನ ನಡೆದಿದ್ದು, ಈ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಕಂದಾಯ ದಾಖಲೆಗಳಲ್ಲಿ ಖಾಸಗಿ ವ್ಯಕ್ತಿಗಳ ಹೆಸರು ನಮೂದಾಗಿರುವುದರಿಂದ ಮಾತ್ರ ಅವರಿಗೆ ಆ ಜಾಗಗಳ ಮೇಲೆ ಕಾನೂನುಬದ್ಧ ಮಾಲೀಕತ್ವ ದೊರೆಯುವುದಿಲ್ಲ. ಸಂಬಂಧಪಟ್ಟ ಇಲಾಖೆಗಳು ಮೂಲ ದಾಖಲೆಗಳು, ಭೂಮಿಯ ಸ್ವರೂಪ ಹಾಗೂ ಐತಿಹಾಸಿಕ ದಾಖಲೆಗಳನ್ನು ಪರಿಶೀಲಿಸಿ ನೈಜ ಮಾಲೀಕತ್ವವನ್ನು ನಿರ್ಧರಿಸಬೇಕು. ತಪ್ಪು ದಾಖಲೆಗಳ ಮೂಲಕ ಸರ್ಕಾರಿ ಜಾಗಗಳನ್ನು ತಮ್ಮ ಹೆಸರಿಗೆ ಮಾಡಿಕೊಂಡಿರುವುದು ಕಂಡುಬಂದರೆ ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಸಂರಕ್ಷಣೆಗೆ ಸಂಬಂಧಿಸಿದ ಕಾನೂನುಗಳ ಪ್ರಕಾರ, ಕೇಂದ್ರ ಸರ್ಕಾರದಿಂದ ಸಂರಕ್ಷಿತ ಸ್ಮಾರಕಗಳ ಸುತ್ತಲಿನ 100 ಮೀಟರ್ ಪ್ರದೇಶವನ್ನು ನಿಷೇಧಿತ ವಲಯ ಹಾಗೂ ಅದರ ಮುಂದಿನ 200 ಮೀಟರ್ ಪ್ರದೇಶವನ್ನು ನಿಯಂತ್ರಿತ ವಲಯವೆಂದು ಪರಿಗಣಿಸಲಾಗುತ್ತದೆ. ಇಂತಹ ಪ್ರದೇಶಗಳಲ್ಲಿ ಕಟ್ಟಡ ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ನಿಯಮಗಳನ್ನು ಪಾಲಿಸುವುದು ಕಡ್ಡಾಯವಾಗಿದೆ. ರಾಯಚೂರು ಕೋಟೆ ವ್ಯಾಪ್ತಿಯಲ್ಲಿ ನಡೆದಿರುವ ನಿರ್ಮಾಣ ಕಾಮಗಾರಿಗಳು ಮತ್ತು ಅತಿಕ್ರಮಣಗಳ ಕುರಿತು ಸಂಬಂಧಪಟ್ಟ ಪುರಾತತ್ವ ಹಾಗೂ ಕಂದಾಯ ಇಲಾಖೆಗಳು ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು.

ಕಳೆದ ಐದು ದಶಕಗಳಿಂದ ರಾಯಚೂರು ನಗರದಲ್ಲಿ ಅಧಿಕಾರ ನಡೆಸಿದ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಜನಪ್ರತಿನಿಧಿಗಳು ಸಾರ್ವಜನಿಕ ಆಸ್ತಿಗಳ ಅತಿಕ್ರಮಣ ತಡೆಯುವಲ್ಲಿ ವಿಫಲರಾಗಿದ್ದಾರೆ. ಕೆಲವು ಪ್ರಭಾವಿ ವ್ಯಕ್ತಿಗಳಿಂದ ಅಕ್ರಮ ಒತ್ತುವರಿ ನಡೆದಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ಜಿಲ್ಲಾಡಳಿತ ಹಾಗೂ ನಗರಸಭೆ ಇಂತಹ ಪ್ರಕರಣಗಳ ವಿರುದ್ಧ ನ್ಯಾಯಾಲಯದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳದಿರುವುದು ಅನುಮಾನಗಳಿಗೆ ಕಾರಣವಾಗಿದೆ ಎಂದು ದೂರಿದರು.

ನಗರದೊಳಗೆ ಹಾಗೂ ಸುತ್ತಮುತ್ತಲಿನ ಗುಡ್ಡಗಳು, ಕೆರೆಗಳು, ಕಂದಕಗಳು, ಕೋಟೆ ಪ್ರದೇಶಗಳು, ಸಾರ್ವಜನಿಕ ಉದ್ಯಾನವನಗಳು ಮತ್ತು ಇತರ ಸಾರ್ವಜನಿಕ ಉಪಯೋಗದ ಸ್ಥಳಗಳು ಅತಿಕ್ರಮಣಕ್ಕೆ ಒಳಗಾಗಿವೆ. ಇದರಿಂದ ನಗರದ ಐತಿಹಾಸಿಕ ಪರಂಪರೆಯ ಜೊತೆಗೆ ಸಾರ್ವಜನಿಕ ಸೌಲಭ್ಯಗಳಿಗೂ ಧಕ್ಕೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಒಂದು ಕಾಲದಲ್ಲಿ ಹರಿಹರ ರಸ್ತೆಯಲ್ಲಿದ್ದ ಸಾರ್ವಜನಿಕ ಉದ್ಯಾನವನವು ಮಾರುಕಟ್ಟೆಗೆ ಬರುವ ಜನರಿಗೆ ವಿಶ್ರಾಂತಿ ಪಡೆಯುವ ತಾಣವಾಗಿತ್ತು. ಅಲ್ಲಿನ ಗ್ರಂಥಾಲಯದಲ್ಲಿ ಸಾರ್ವಜನಿಕರು ಪತ್ರಿಕೆಗಳನ್ನು ಓದುವ ಹಾಗೂ ಸಮಯ ಕಳೆಯುವ ಅವಕಾಶವಿತ್ತು. ಆದರೆ ಇಂತಹ ಸಾರ್ವಜನಿಕ ಸ್ಥಳಗಳು ಕ್ರಮೇಣ ಕಣ್ಮರೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಇದೇ ರೀತಿ ನಗರದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಲಾಗಿದ್ದ ಅನೇಕ ಮೂತ್ರಾಲಯಗಳು ಹಾಗೂ ಶೌಚಾಲಯಗಳು ಇಲ್ಲವಾಗಿವೆ. ಪರಿಣಾಮ ಮಾರುಕಟ್ಟೆ ಸೇರಿದಂತೆ ನಗರದ ಪ್ರಮುಖ ಪ್ರದೇಶಗಳಿಗೆ ಬರುವ ಸಾರ್ವಜನಿಕರು, ಮಹಿಳೆಯರು ಹಾಗೂ ವೃದ್ಧರು ಶೌಚಾಲಯಗಳ ಕೊರತೆಯಿಂದ ತೊಂದರೆ ಅನುಭವಿಸುವಂತಾಗಿದೆ. ಸಾರ್ವಜನಿಕ ಆಸ್ತಿಗಳನ್ನು ಉಳಿಸುವುದರ ಜೊತೆಗೆ ಮೂಲಸೌಕರ್ಯಗಳನ್ನು ಒದಗಿಸುವುದು ಸ್ಥಳೀಯ ಆಡಳಿತದ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ನಗರದ ಸಾರ್ವಜನಿಕ ಆಸ್ತಿಗಳ ಅತಿಕ್ರಮಣದ ಬಗ್ಗೆ ಈ ಹಿಂದೆಯೇ ವಿವಿಧ ಸಾಮಾಜಿಕ ಸಂಘಟನೆಗಳು ಧ್ವನಿ ಎತ್ತಬೇಕಾಗಿತ್ತು. ಆದರೆ ಇಂತಹ ಗಂಭೀರ ಸಮಸ್ಯೆಗಳ ಕುರಿತು ನಿರೀಕ್ಷಿತ ಮಟ್ಟದಲ್ಲಿ ಹೋರಾಟ ನಡೆಯದಿರುವುದು ವಿಷಾದನೀಯ. ಸಾರ್ವಜನಿಕ ಆಸ್ತಿಗಳ ರಕ್ಷಣೆಯ ವಿಷಯದಲ್ಲಿ ಸಂಘಟನೆಗಳು, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದು ಹೇಳಿದರು.

ರಾಯಚೂರು ಜಿಲ್ಲಾ ನಾಗರಿಕ ಸಮಿತಿಯ ವತಿಯಿಂದ ಈಗಾಗಲೇ ಸಂಬಂಧಪಟ್ಟ ಇಲಾಖೆಗಳಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಆದರೂ ಇದುವರೆಗೆ ಯಾವುದೇ ಸಮರ್ಪಕ ಸ್ಪಂದನೆ ದೊರೆತಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಅತಿಕ್ರಮಣದ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತಿದೆ ಎಂದು ಆರೋಪಿಸಿದರು.

ಅಂಬೇಡ್ಕರ್ ವೃತ್ತದ ಎದುರಿನ ಸರ್ವೆ ನಂ.1498ರ 1 ಎಕರೆ 23 ಗುಂಟೆ ಜಾಗ ಸೇರಿದಂತೆ ಮಾವಿನ ಕೆರೆಯಿಂದ ರಾಯಚೂರು ಕೋಟೆಯವರೆಗೆ ಇರುವ ರಾಜಕಾಲುವೆ, ಕಂದಕಗಳು ಹಾಗೂ ಐತಿಹಾಸಿಕ ಸ್ಥಳಗಳ ಮೂಲ ದಾಖಲೆಗಳನ್ನು ಪರಿಶೀಲಿಸಬೇಕು. ಪುರಾತತ್ವ ಇಲಾಖೆಗೆ ಸಂಬಂಧಿಸಿದ ಪ್ರದೇಶಗಳ ಗಡಿಗಳನ್ನು ಗುರುತಿಸಿ ಅಧಿಕೃತವಾಗಿ ಘೋಷಿಸುವುದರ ಜೊತೆಗೆ ಅತಿಕ್ರಮಣ ತೆರವಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಲ್ಲದೆ ಬಸವೇಶ್ವರ ವೃತ್ತದಲ್ಲಿರುವ ಬಸವೇಶ್ವರರ ಪುತ್ಥಳಿಯನ್ನು ವೃತ್ತದ ಮಧ್ಯಭಾಗದಲ್ಲಿ ಸ್ಥಾಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ ಹಾಗೂ ಸಾರ್ವಜನಿಕ ಆಸ್ತಿಗಳ ರಕ್ಷಣೆಗಾಗಿ ಜಿಲ್ಲಾಡಳಿತ ನಿರ್ದಿಷ್ಟ ಕಾರ್ಯಯೋಜನೆ ರೂಪಿಸಬೇಕು ಎಂದು ಒತ್ತಾಯಿಸಿದರು.

ಈ ಬೇಡಿಕೆಗಳ ಕುರಿತು ಜಿಲ್ಲಾಡಳಿತ ಕೂಡಲೇ ಸ್ಪಂದಿಸಿ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಸಾರ್ವಜನಿಕರನ್ನು ಸಂಘಟಿಸಿ ಹೋರಾಟ ನಡೆಸಲಾಗುವುದು. ಅಗತ್ಯಬಿದ್ದರೆ ಅತಿಕ್ರಮಣದ ವಿರುದ್ಧ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ಕಾನೂನು ಹೋರಾಟ ಮುಂದುವರಿಸಲಾಗುವುದು ಎಂದು ಅಮರೇಗೌಡ ಪಾಟೀಲ್ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ವಕೀಲ ಎಸ್. ಮಾರಪ್ಪ, ಶರಣಪ್ಪ ದಿನ್ನಿ, ಕೃಷ್ಣ, ನರಸಿಂಹಲು ಮರ್ಚೆಟ್ ಹಾಳ, ಶ್ರೀನಿವಾಸ ಕೊಪ್ಪರ, ಹೇಮರಾಜ್ ಅಸ್ಕಿಹಾಳು, ಆಂಜನೇಯ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸ್ವಾಮಿನಾಥನ್ ಆಯೋಗದ ಶಿಫಾರಸು ಜಾರಿಗೆ ಎರಡು ತಿಂಗಳ ಗಡುವು: ಶರಣಪ್ಪ ಮರಳಿ ಸುಲ್ತಾನಪುರ

ಬೆಳೆಗಳಿಗೂ ವೈಜ್ಞಾನಿಕ ಬೆಲೆ ನಿಗದಿಪಡಿಸಬೇಕು. ರೈತರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯುವಂತಹ ಕೃಷಿ ಮಾರುಕಟ್ಟೆ ವ್ಯವಸ್ಥೆ ರೂಪಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಪ್ರತಿಪಾದಿಸಿದರು.

ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ದರಕ್ಕೆ ವರ್ತಕರು ಕೃಷಿ ಉತ್ಪನ್ನಗಳನ್ನು ಖರೀದಿಸದಂತೆ ಕಾನೂನುಬದ್ಧ ನಿರ್ಬಂಧ ವಿಧಿಸಬೇಕು. ಒಂದು ವೇಳೆ ಮಾರುಕಟ್ಟೆಯಲ್ಲಿ ಬೆಲೆ ಕುಸಿತ ಉಂಟಾದರೆ ಸರ್ಕಾರವೇ ಮಧ್ಯಪ್ರವೇಶಿಸಿ ವರ್ಷಪೂರ್ತಿ ಖರೀದಿ ಕೇಂದ್ರಗಳನ್ನು ಕಾರ್ಯನಿರ್ವಹಿಸುವಂತೆ ಮಾಡಬೇಕು. ರೈತರಿಂದ ಖರೀದಿಸಿದ ಉತ್ಪನ್ನಗಳ ಹಣವನ್ನು ಅದೇ ದಿನ ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮಾ ಮಾಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಳೆದ ಎರಡು ದಶಕಗಳಿಂದ ಸ್ವಾಮಿನಾಥನ್ ಆಯೋಗದ ಪ್ರಮುಖ ಶಿಫಾರಸುಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದಿರುವುದು ರೈತರಿಗೆ ಮಾಡಿದ ಅನ್ಯಾಯವಾಗಿದೆ. ಸರ್ಕಾರಗಳು ರೈತರ ಹಿತದೃಷ್ಟಿಯಿಂದ ಕೇವಲ ಭರವಸೆ ನೀಡದೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕಾನೂನು ರೂಪಿಸಬೇಕು ಎಂದು ಆಗ್ರಹಿಸಿದರು.

ಕೃಷಿ ಕ್ಷೇತ್ರದಲ್ಲಿ ಉಂಟಾಗಿರುವ ಆರ್ಥಿಕ ಬಿಕ್ಕಟ್ಟನ್ನು ಗಮನದಲ್ಲಿಟ್ಟುಕೊಂಡು ರೈತರ ಎಲ್ಲ ಕೃಷಿ ಸಾಲಗಳನ್ನು ಸಂಪೂರ್ಣ ಮನ್ನಾ ಮಾಡಬೇಕು. ಸಾಲ ವಸೂಲಾತಿ ನೆಪದಲ್ಲಿ ಬ್ಯಾಂಕ್ ಅಧಿಕಾರಿಗಳು ರೈತರ ಮನೆಗಳಿಗೆ ತೆರಳಿ ಒತ್ತಡ ಹೇರುವುದು, ಟ್ರ್ಯಾಕ್ಟರ್ ಹಾಗೂ ಕೃಷಿ ಉಪಕರಣಗಳನ್ನು ವಶಪಡಿಸಿಕೊಳ್ಳುವುದು, ನೋಟಿಸ್ ಜಾರಿಗೊಳಿಸಿ ಕಿರುಕುಳ ನೀಡುವಂತಹ ಕ್ರಮಗಳಿಗೆ ಕಡಿವಾಣ ಹಾಕಬೇಕು. ಸಾಲದ ಹೊರೆಯಿಂದ ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರ ಆರ್ಥಿಕ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದರು.

ಬರಗಾಲ ಮತ್ತು ನೀರಿನ ಕೊರತೆಯಿಂದ ಕೃಷಿ ಉತ್ಪಾದನೆಗೆ ತೀವ್ರ ಹೊಡೆತ ಬೀಳುತ್ತಿದೆ. ಹೀಗಾಗಿ ಸಮಗ್ರ ನೀರಾವರಿ ಅಭಿವೃದ್ಧಿ ಯೋಜನೆಗಳಿಗೆ ಆದ್ಯತೆ ನೀಡಬೇಕು. ನದಿ ಜೋಡಣೆ ಯೋಜನೆಗಳ ಸಾಧ್ಯತೆಯನ್ನು ಪರಿಶೀಲಿಸಿ ನೀರಿನ ಸಮರ್ಪಕ ಬಳಕೆಗೆ ಕ್ರಮ ಕೈಗೊಳ್ಳಬೇಕು. ವರ್ಷಗಳಿಂದ ಸ್ಥಗಿತಗೊಂಡಿರುವ ಏತ ನೀರಾವರಿ ಯೋಜನೆಗಳನ್ನು ಪುನಶ್ಚೇತನಗೊಳಿಸಿ ರೈತರ ಜಮೀನುಗಳಿಗೆ ನಿರಂತರ ನೀರು ಒದಗಿಸುವ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ರೈತರು ಮಾರಾಟ ಮಾಡುವ ಉತ್ಪನ್ನಗಳ ತೂಕ ಹಾಗೂ ಗುಣಮಟ್ಟದ ಹೆಸರಿನಲ್ಲಿ ಅನಧಿಕೃತವಾಗಿ ಹಣ ಕಡಿತಗೊಳಿಸುವ ಪದ್ಧತಿಯನ್ನು ನಿಲ್ಲಿಸಬೇಕು. ವಿಶೇಷವಾಗಿ 'ಸೂಟ್' ಹೆಸರಿನಲ್ಲಿ ರೈತರ ಹಣ ಕಡಿತ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಕೃಷಿ ಮಾರುಕಟ್ಟೆಯಲ್ಲಿ ಪಾರದರ್ಶಕತೆ ಕಾಪಾಡುವ ಮೂಲಕ ರೈತರಿಗೆ ನ್ಯಾಯಯುತ ದರ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಇದರ ಜೊತೆಗೆ ಸರ್ಕಾರಿ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು. ಮದ್ಯ ಮಾರಾಟ ನಿಷೇಧಕ್ಕೆ ಕ್ರಮ ಕೈಗೊಳ್ಳಬೇಕು. ರೈತರ ಹಿತಾಸಕ್ತಿಗೆ ವಿರುದ್ಧವಾಗಿರುವ ಕೃಷಿ ಕಾಯ್ದೆಗಳು ಹಾಗೂ ನೀತಿಗಳನ್ನು ಹಿಂಪಡೆದು ಕೃಷಿಕರ ಬದುಕಿಗೆ ಭದ್ರತೆ ಒದಗಿಸುವ ಜನಪರ ಕಾನೂನುಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ರೈತರ ಬೇಡಿಕೆಗಳನ್ನು ಈಡೇರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಕ್ಷಣ ಮುಂದಾಗಬೇಕು. ಎರಡು ತಿಂಗಳೊಳಗೆ ಸ್ವಾಮಿನಾಥನ್ ಆಯೋಗದ ಶಿಫಾರಸುಗಳ ಅನುಷ್ಠಾನಕ್ಕೆ ಸ್ಪಷ್ಟ ನಿರ್ಧಾರ ಕೈಗೊಳ್ಳದಿದ್ದರೆ ರಾಷ್ಟ್ರಮಟ್ಟದಲ್ಲಿ ರೈತ ಸಂಘಟನೆಗಳನ್ನು ಒಗ್ಗೂಡಿಸಿ ಹೋರಾಟ ತೀವ್ರಗೊಳಿಸಲಾಗುವುದು ಎಂದು ಶರಣಪ್ಪ ಮರಳಿ ಸುಲ್ತಾನಪುರ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ರೈತ ಮುಖಂಡರಾದ ರಾಮಯ್ಯ ಜವಳಗೆರೆ, ನರಸಪ್ಪ ದೇವಸುಗೂರು, ವೆಂಕಟೇಶ, ಚೆನ್ನಪ್ಪ, ರಾಮಬಾಬು, ಚನ್ನಬಸಯ್ಯ, ನಾಗಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದಲಿತ ಮುಖಂಡರ ಹತ್ಯೆ, ಅತ್ಯಾಚಾರ ಪ್ರಕರಣಗಳ ಸಿಐಡಿ ತನಿಖೆಗೆ ಒತ್ತಾಯ

ಮೂರು ಪ್ರಕರಣಗಳ ತನಿಖೆಯನ್ನು ಕೂಡಲೇ ಸಿಐಡಿಗೆ ವಹಿಸಬೇಕು. ತನಿಖೆಯಲ್ಲಿ ತಪ್ಪಿತಸ್ಥರೆಂದು ಕಂಡುಬರುವವರ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಸಿಂಧನೂರು ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತ ಸಮುದಾಯದವರ ಮೇಲೆ ದೌರ್ಜನ್ಯ ನಡೆಸಿ ಸಾಮಾಜಿಕ ಬಹಿಷ್ಕಾರ ಹೇರಿರುವ ಆರೋಪದ ಕುರಿತು ಪ್ರಸ್ತಾಪಿಸಿದ ಅವರು, ಇಂತಹ ಅಮಾನವೀಯ ಕೃತ್ಯಗಳಿಗೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಸಂವಿಧಾನ ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ ಮತ್ತು ಘನತೆಯಿಂದ ಬದುಕುವ ಹಕ್ಕನ್ನು ನೀಡಿದ್ದು, ಅದನ್ನು ಉಲ್ಲಂಘಿಸುವವರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಿಡಿಗೋಳ ಗ್ರಾಮದಲ್ಲಿ ನಡೆದಿರುವ ದೌರ್ಜನ್ಯವನ್ನು ಖಂಡಿಸಿ ಹಾಗೂ ಸಂತ್ರಸ್ತರಿಗೆ ನ್ಯಾಯ ದೊರಕಿಸಿಕೊಡುವ ಉದ್ದೇಶದಿಂದ ಭಾನುವಾರ ಬೃಹತ್ ಬೈಕ್ ರ್ಯಾಲಿ ಮತ್ತು ಗ್ರಾಮದಲ್ಲಿ ಬಹಿರಂಗ ಸಭೆ ಆಯೋಜಿಸಲಾಗಿದೆ. ಆದರೆ, ಜಿಲ್ಲಾಡಳಿತ ಬಹಿರಂಗ ಸಭೆ ನಡೆಸಲು ಅನುಮತಿ ನೀಡದಿರುವುದು ಖಂಡನೀಯ. ಶಾಂತಿಯುತವಾಗಿ ಪ್ರತಿಭಟಿಸುವ ಪ್ರಜಾಸತ್ತಾತ್ಮಕ ಹಕ್ಕನ್ನು ಮೊಟಕುಗೊಳಿಸಲು ಪ್ರಯತ್ನಿಸಲಾಗುತ್ತಿದೆ ಎಂದು ದೂರಿದರು.

ಜಿಲ್ಲಾಡಳಿತ ಅನುಮತಿ ನಿರಾಕರಿಸಿದರೂ ಪೂರ್ವನಿಗದಿಯಂತೆ ತಿಡಿಗೋಳ ಚಲೋ ಬೈಕ್ ರ್ಯಾಲಿ ನಡೆಸಲಾಗುವುದು. ಈ ಸಂದರ್ಭದಲ್ಲಿ ಪೊಲೀಸರು ಬಂಧಿಸಿದರೂ ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ದಲಿತರ ಹಕ್ಕುಗಳು, ಸ್ವಾಭಿಮಾನ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸುವುದು ನಮ್ಮ ಸಂಘಟನೆಯ ಬದ್ಧತೆಯಾಗಿದೆ. ಬಂಧನ ಹಾಗೂ ಹೋರಾಟಗಳು ನಮಗೆ ಹೊಸದೇನಲ್ಲ ಎಂದು ಡಾ. ಆರ್. ಮೋಹನರಾಜ್ ಎಚ್ಚರಿಸಿದರು.

ಸರ್ಕಾರ ದಲಿತ ಸಮುದಾಯದ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ದೌರ್ಜನ್ಯ ಪ್ರಕರಣಗಳ ತನಿಖೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವುದರ ಜೊತೆಗೆ ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಒದಗಿಸಲು ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ಮುಖಂಡರಾದ ರವೀಂದ್ರನಾಥ ಪಟ್ಟಿ, ರಾಜು ಪಟ್ಟಿ, ಮಹೇಶ್, ಸಂತೋಷ್, ಎಂ.ಆರ್. ಭೇರಿ ಹಾಗೂ ಪ್ರಸಾದ್ ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಪ್ರಜಾಸೇವಾ ಆಂದೋಲನ ಕಾರ್ಯಕ್ರಮ ಸರಕಾರಿ ಸೌಲಭ್ಯಗಳ ಸದ್ಬಳಕೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಸಾರ್ವಜನಿಕರಲ್ಲಿ ಮನವಿ

ಮತ್ತು ಎನ್‌ಆರ್‌ಬಿಸಿ ಮೂಲಕ ನೀರು ಹರಿಸಲು ಹಲವು ಬಾರಿ ಮನವಿ ಮಾಡಲಾಗಿದ್ದು, ರೈತರ ಸಂಕಷ್ಟಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ದೇವದುರ್ಗ ಮತ್ತು ಅರಕೇರಾ ತಾಲೂಕುಗಳಲ್ಲಿ ಬಾಲ್ಯವಿವಾಹ ಪ್ರಕರಣಗಳು ಹಾಗೂ ಚಿಕ್ಕ ವಯಸ್ಸಿನಲ್ಲಿ ಗರ್ಭಿಣಿಯರಾಗುವ ಘಟನೆಗಳು ಮತ್ತು ಪೋಕ್ಸೋ ಪ್ರಕರಣಗಳು ಹೆಚ್ಚಾಗಿರುವುದು ಗಮನಕ್ಕೆ ಬಂದಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಗರ್ಭಿಣಿಯರು, ಬಾಣಂತಿಯರು ಹಾಗೂ ಹೆಣ್ಣು ಮಕ್ಕಳಿಗಾಗಿ ಇರುವ ವಿವಿಧ ಸರ್ಕಾರಿ ಯೋಜನೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಪ್ರಜಾಸೇವಾ ಕಾರ್ಯಕ್ರಮದಲ್ಲಿ ವಿವಿಧ ಸ್ಟಾಲ್‌ಗಳನ್ನು ತೆರೆಯಲಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆಯಿಂದ ಹಾಸ್ಟೆಲ್ ಪ್ರವೇಶ ಹಾಗೂ ಇತರೆ ಸೌಲಭ್ಯಗಳು, ಆಹಾರ ಇಲಾಖೆಯಿಂದ ಪಡಿತರ ಚೀಟಿ ವಿತರಣೆ ಮತ್ತು ಅದನ್ನು ನಿರಂತರಗೊಳಿಸುವ ಕುರಿತು ಕ್ರಮ ವಹಿಸಲಾಗುತ್ತಿದೆ. ಈಗಾಗಲೇ ಬರಗಾಲ ಘೋಷಣೆಯಾಗಿರುವುದರಿಂದ ವಿ.ಬಿ.ಜಿ ರಾಮ್‌ಜಿ ಯೋಜನೆಯಡಿಯಲ್ಲಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ 125 ದಿನಗಳ ಕೆಲಸವನ್ನು ಒದಗಿಸಲು ಗ್ರಾಮ ಪಂಚಾಯತಿ ಮಟ್ಟದಲ್ಲಿ ಆಕ್ಷನ್ ಪ್ಲಾನ್ ಮಾಡಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು, ಸ್ಥಳೀಯವಾಗಿ ಯಾವುದೇ ಸಮಸ್ಯೆಗಳಿದ್ದರೂ ಅದಕ್ಕಾಗಿ ಇಲ್ಲಿ ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗಿದ್ದು, ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಲಿಖಿತವಾಗಿ ಸಲ್ಲಿಸಬಹುದಾಗಿದೆ ಎಂದರು.

ಪ್ರಾಸ್ತಾವಿಕವಾಗಿ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಮಾತನಾಡಿ, ಸರ್ಕಾರದ ಸೇವೆಗಳನ್ನು ಸಾರ್ವಜನಿಕರ ಬಳಿಗೆ ತಲುಪಿಸುವ ಸದುದ್ದೇಶದಿಂದ ಪ್ರಜಾಸೇವೆಯ ಆಂದೋಲನದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರದ ವಿವಿಧ ಯೋಜನೆಗಳನ್ನು ಸಾರ್ವಜನಿಕರ ಮನೆ ಬಾಗಿಲಿಗೆ ತಲುಪಿಸುವುದಾಗಿದೆ. ತಾಲೂಕು ಮತ್ತು ಹೋಬಳಿ ಮಟ್ಟದಲ್ಲಿ ಈ ಕಾರ್ಯಕ್ರಮವು ಜರುಗುತ್ತಿದ್ದು. ಸರ್ಕಾರದ ವಿವಿಧ ಇಲಾಖೆಗಳ ಯೋಜನೆಗಳ ಮಾಹಿತಿ ಒಂದೇ ಕಡೆ ಲಭ್ಯವಿರಲಿದೆ. ಸಾರ್ವಜನಿಕರು ತಮ್ಮ ವೈಯಕ್ತಿಕ ಅಥವಾ ಗ್ರಾಮದ ಕುಂದುಕೊರತೆಗಳಿಗೆ ಪರಿಹಾರ ಪಡೆಯಬಹುದಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಶರಣಬಸವ ಅವರು ಮಾತನಾಡಿ, ಜನಸೇವೆ ಮತ್ತು ಸೌಲಭ್ಯಗಳ ನೇರ ವಿತರಣೆಗೆ ಒತ್ತು ನೀಡಲಾಗುತ್ತಿದ್ದು, ಸರ್ಕಾರದಿಂದ ಸಿಗತಕ್ಕಂತಹ ಎಲ್ಲಾ ಸೌಲಭ್ಯಗಳು ಮಧ್ಯವರ್ತಿಗಳ ಹಾವಳಿಯಿಲ್ಲದೆ ನೇರವಾಗಿ ಜನಸಾಮಾನ್ಯರಿಗೆ ತಲುಪಬೇಕು ಎಂಬ ಮಹತ್ವದ ಉದ್ದೇಶದಿಂದ 'ಜನಸ್ನೇಹಿ ಈ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ, ಕಳೆದ ಮೂರು ತಿಂಗಳಿದ ಈ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಿದ್ದು, ಮೊದಲ ಹಂತದಲ್ಲಿ ಮಾನ್ವಿ ಹಾಗೂ ಎರಡನೇ ಹಂತದಲ್ಲಿ ಲಿಂಗಸೂಗೂರಿನಲ್ಲಿ ಯಶಸ್ವಿಯಾಗಿ ಆಯೋಜಿಸಲಾಗಿದೆ. ಇಂದು ಮೂರನೇ ಕಾರ್ಯಕ್ರಮವು ಅರಕೇರಿಯಲ್ಲಿ ಜರುಗುತ್ತಿದೆ ಎಂದರು.

ಮಸರಕಲ್ ಗ್ರಾಮದಲ್ಲಿ ಶಕ್ತಿ ಕೇಂದ್ರದಲ್ಲಿ ಪೌಷ್ಟಿಕ ಆಹಾರದ ಪೌಡರ್ ತಯಾರಿಸಲಾಗುತ್ತಿದ್ದು, ಇದನ್ನು ದೇವದುರ್ಗ ತಾಲ್ಲೂಕಿನ ವಿವಿಧ ಕುಟುಂಬಗಳಿಗೆ ಹಾಗೂ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಕಳೆದ ಎರಡು ತಿಂಗಳಿದ ಉಚಿತವಾಗಿ ವಿತರಿಸಲಾಗುತ್ತಿದೆ ಎಂದರು.

ಈ ವೇಳೆ ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹಮದ್ ಅವರು ಮಾತನಾಡಿ, ಜನರ ಯಾವುದೇ ಸಮಸ್ಯೆಗಳು ಅಥವಾ ಕುಂದುಕೊರತೆಗಳಿದ್ದರೂ ಅವುಗಳನ್ನು ಪರಿಹರಿಸಲು ಸರಕಾರವೇ ಜನರ ಮನೆಬಾಗಿಲಿಗೆ ಬಂದಿದೆ. ಪ್ರಜಾಸೇವಾ ಆಂದೋಲನದ ಮೂಲಕ ಕೌಂಟರ್‌ಗಳನ್ನು ತೆರೆದು ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಒದಗಿಸಲಾಗುತ್ತಿದೆ. ಇತರ ಸಮಸ್ಯೆಗಳಿದ್ದರೆ ಪ್ರಜಾಸೇವಾ ಪೋರ್ಟಲ್‌ನಲ್ಲಿ ಅಪ್ ಲೋಡ್ ಮಾಡಿ ನಿಯಮಾನುಸಾರ ಪರಿಶೀಲಿಸಿ ಪರಿಹಾರ ನೀಡಲಾಗುತ್ತದೆ ಎಂದರು. ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು 10 ಕೆ.ಜಿ ಅಕ್ಕಿಯನ್ನು ಅನ್ನಭಾಗ್ಯ ಯೋಜನೆಯಡಿ ನೀಡಲಾಗುತ್ತಿದೆ. ಇ-ಕೆವೈಸಿ ಕಡ್ಡಾಯವಾಗಿದ್ದು, ಫಲಾನುಭವಿಗಳು ತಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಇ-ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ ಎಂದರು.

ಬಾಲ್ಯ ವಿವಾಹ ನಿಷೇಧ ಪ್ರಜ್ಞೆ ವಿಧಿ: ಬಾಲ್ಯ ವಿವಾಹ ಮುಕ್ತ ಭಾರತ 100 ದಿನಗಳ ಅಭಿಯಾನ ಅಂಗವಾಗಿ ದೇವದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಹೇಶ ಅವರಿಂದ ಬಾಲ್ಯ ವಿವಾಹ ನಿಷೇಧ ಪ್ರಜ್ಞೆ ವಿಧಿಯನ್ನು ಇದೇ ಸಂದರ್ಭದಲ್ಲಿ ಬೋಧಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಂದಾಯ ಇಲಾಖೆಯ ವಿವಿಧ ಯೋಜನೆಯಡಿಯಲ್ಲಿ ಅರ್ಹ ಫಲಾನುಭವಿಗಳಿಗೆ ಇದೆ ಸಂದರ್ಭದಲ್ಲಿ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ಅರಕೇರಾದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಪ್ರಜಾಸೇವಾ ಆಂದೋಲನ ಸಭೆಯ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಆರೋಗ್ಯ ಇಲಾಖೆ, ಎನ್.ಆರ್.ಎಲ್.ಎಂ. ಕಂದಾಯ ಇಲಾಖೆ ಹಾಗೂ ವಿವಿಧ ಸ್ವಸಹಾಯ ಸಂಘದ ವಿವಿಧ ಮಳಿಗೆಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಭೇಟಿ ನೀಡಿ ವೀಕ್ಷಣೆ ಮಾಡಿದರು.

ಈ ಕಾರ್ಯಕ್ರಮದಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಅರಣ್ಯ ಅಧಿಕಾರಿ ಸುರೇಂದ್ರ ಬಾಬು, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲ ಸಿದ್ದಪ್ಪ ಪೂಜಾರಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್., ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಸರಸ್ವತಿ, ಕಾರ್ಮಿಕ ಇಲಾಖೆಯ ಅಧಿಕಾರಿ ಆರತಿ, ಯುವ ಸಬಲೀಕರಣ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ್, ಅರಕೇರಾ ತಹಶಿಲ್ದಾರ್ ಅಮರೇಶ್ ಬಿರಾದಾ,ರ್ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ವೈ.ವಿ.ವಾಲ್ಮೀಕಿ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಜನಸಾಮಾನ್ಯರ ಬದುಕು ದುಸ್ತರಗೊಳಿಸಿದ ಕಾಂಗ್ರೆಸ್ ಸರ್ಕಾರ: ಶಾಸಕ ಡಾ. ಶಿವರಾಜ ಪಾಟೀಲ್ ಆಕ್ರೋಶ

ಪ್ರಮಾಣಪತ್ರ ಸೇರಿದಂತೆ ವಿವಿಧ ದಾಖಲೆಗಳ ಶುಲ್ಕ ಹೆಚ್ಚಿಸಲಾಗಿದೆ. ರೈತರು ಪಹಣಿ ಪಡೆಯಲು 100 ರೂ. ಪಾವತಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಸ್ವಂತ ಜಮೀನಿನ ಸರ್ವೇ ಮಾಡಿಸಿಕೊಳ್ಳಲು 10 ಸಾವಿರ ರೂ. ಶುಲ್ಕ ವಿಧಿಸಲಾಗುತ್ತಿದೆ. ಇಂತಹ ನಿರ್ಧಾರಗಳು ಸಾಮಾನ್ಯ ಜನರ ಆರ್ಥಿಕ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳ ನಿರ್ವಹಣೆಯೂ ಸಮರ್ಪಕವಾಗಿಲ್ಲ. ಟೈ,ರ್ ಟ್ಯೂಬ್, ಬ್ಯಾಟರಿ ಸೇರಿದಂತೆ ಅಗತ್ಯ ಬಿಡಿಭಾಗಗಳ ಕೊರತೆಯಿಂದ ಪ್ರಯಾಣಿಕರು ತೊಂದರೆ ಅನುಭವಿಸುತ್ತಿದ್ದಾರೆ. ಸರ್ಕಾರ ಸಾರಿಗೆ ವ್ಯವಸ್ಥೆಯನ್ನು ಸುಧಾರಿಸುವ ಬದಲು ಪ್ರಯಾಣ ದರ ಹೆಚ್ಚಳಕ್ಕೆ ಮುಂದಾಗಿರುವುದು ಸರಿಯಲ್ಲ ಎಂದು ಟೀಕಿಸಿದರು.

ರಾಜ್ಯ ಸರ್ಕಾರ ಕೂಡಲೇ ಬೆಲೆ ಹಾಗೂ ಶುಲ್ಕ ಹೆಚ್ಚಳದ ನಿರ್ಧಾರಗಳನ್ನು ಹಿಂಪಡೆಯಬೇಕು. ರೈತರಿಗೆ ಬೆಳೆ ಹಾನಿಗೆ ಅನುಗುಣವಾಗಿ ಪರಿಹಾರ ನೀಡಬೇಕು. ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ನಿಯಮಿತವಾಗಿ ವಿತರಿಸುವುದರ ಜೊತೆಗೆ ಉದ್ಯೋಗ, ನೀರಾವರಿ ಮತ್ತು ಸಾರಿಗೆ ಸಮಸ್ಯೆಗಳನ್ನು ಪರಿಹರಿಸಬೇಕು. ಇಲ್ಲವಾದಲ್ಲಿ ಸಾರ್ವಜನಿಕರೊಂದಿಗೆ ಸೇರಿ ರಾಜ್ಯಾದ್ಯಂತ ಹೋರಾಟ ತೀವ್ರಗೊಳಿಸಲಾಗುವುದು ಎಂದು ಶಾಸಕ ಡಾ. ಶಿವರಾಜ ಪಾಟೀಲ್ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ್, ಕಡಗೋಳ್ ಅಂಜಿನಯ್ಯ, ರವೀಂದ್ರ ಜಲ್ದಾ,ರ್ ರಾಜಕುಮ್ಾ,ರ್ ಸಂತೋಷ ರಾಜುಗುರು, ಶಶಿರಾಜ್, ಶರಣಮ್ಮ ಕಾಮರೆಡ್ಡಿ, ರೂಪ ಶ್ರೀನಿವಾಸ್ ನಾಯಕ್, ಅಶ್ವಿನಿ, ವಿಜಯರಾಜೇಶ್ವರಿ ಗೋಪಿ ಶೆಟ್ಟಿ, ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

₹7.05 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ದದ್ದಲ್ ಭೂಮಿಪೂಜೆ

ಕಾಮಗಾರಿಗಳು ಗ್ರಾಮೀಣ ಪ್ರದೇಶದ ಮೂಲಸೌಕರ್ಯ ಬಲವರ್ಧನೆಗೆ ಮಹತ್ವದ ಹೆಜ್ಜೆಯಾಗಿದ್ದು, ಕಾಮಗಾರಿಗಳನ್ನು ಗುಣಮಟ್ಟದಿಂದ ಪೂರ್ಣಗೊಳಿಸುವುದು ಅಗತ್ಯವಾಗಿದೆ.

ಈ ಸಂದರ್ಭದಲ್ಲಿ ಮೀರಾಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ಸ್ಥಳೀಯ ಜನಪ್ರತಿನಿಧಿಗಳು, ನಾಮನಿರ್ದೇಶಿತ ಸದಸ್ಯರು, ಗ್ರಾಮಸ್ಥರು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಗಾಣದಾಳ ಸೇರಿ ನಾಲ್ಕು ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಲು ಆಗ್ರಹ: 1,662ಕ್ಕೂ ಹೆಚ್ಚು ಗ್ರಾಮಸ್ಥರಿಂದ ಜನಾಭಿಪ್ರಾಯ





ಅರಕೇರಾ, ನ.7: ಅರಕೇರಾ ತಾಲೂಕು ವ್ಯಾಪ್ತಿಗೆ ಒಳಪಟ್ಟಿರುವ ಗಾಣದಾಳ ಗ್ರಾಮ ಪಂಚಾಯಿತಿಯ ಗಾಣದಾಳ, ಕಮಲದಿನ್ನಿ, ಕಕ್ಕಲದೊಡ್ಡಿ ಹಾಗೂ ಸುಣ್ಣದಕಲ್ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಬೇಕು ಎಂದು ಆಗ್ರಹಿಸಿ ನಡೆದ ಜನಾಭಿಪ್ರಾಯ ಸಂಗ್ರಹ ಸಭೆಯಲ್ಲಿ 1,662ಕ್ಕೂ ಹೆಚ್ಚು ಗ್ರಾಮಸ್ಥರು ಭಾಗವಹಿಸಿ ಬೇಡಿಕೆಗೆ ಬೆಂಬಲ ವ್ಯಕ್ತಪಡಿಸಿದರು.

ಶನಿವಾರ ಬೆಳಗ್ಗೆ 11 ಗಂಟೆಗೆ ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅರಕೇರಾ ತಹಶೀಲ್ದಾರ್ ಗ್ರೇಡ್-2 ಶ್ರೀಧರ ಪವಾರ್ ಅವರ ನೇತೃತ್ವದಲ್ಲಿ ಜನಾಭಿಪ್ರಾಯ ಸಂಗ್ರಹ ಸಭೆ ನಡೆಯಿತು. ನಾಲ್ಕು ಗ್ರಾಮಗಳ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು, ಕೈ ಎತ್ತುವ ಮೂಲಕ ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸುವ ಬೇಡಿಕೆಗೆ ಬೆಂಬಲ ಸೂಚಿಸಿದರು.

ಸಭೆಯಲ್ಲಿ ಗ್ರಾಮಸ್ಥರ ಅಭಿಪ್ರಾಯಗಳನ್ನು ಆಲಿಸಿದ ತಹಶೀಲ್ದಾರ್ ಶ್ರೀಧರ ಪವಾರ್, ಸಾರ್ವಜನಿಕರ ಅಭಿಪ್ರಾಯಗಳು ಹಾಗೂ ಸಭೆಯ ನಡಾವಳಿಯನ್ನು ಸಂಬಂಧಪಟ್ಟ ಮೇಲಧಿಕಾರಿಗಳಿಗೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಅರಕೇರಾ ತಾಲೂಕು ಕೇಂದ್ರದಿಂದ ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳು ಸುಮಾರು 40ರಿಂದ 60 ಕಿ.ಮೀ. ದೂರದಲ್ಲಿವೆ. ಇದರಿಂದ ಕಂದಾಯ ದಾಖಲೆಗಳು, ಪಿಂಚಣಿ ಸೌಲಭ್ಯಗಳು ಹಾಗೂ ವಿವಿಧ ಸರ್ಕಾರಿ ಸೇವೆಗಳನ್ನು ಪಡೆಯಲು ರೈತರು, ಮಹಿಳೆಯರು, ವೃದ್ಧರು ಮತ್ತು ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡರು.

ವಿಶೇಷವಾಗಿ ಸಮರ್ಪಕ ಸಾರಿಗೆ ವ್ಯವಸ್ಥೆಯ ಕೊರತೆಯಿಂದ ತಾಲೂಕು ಕೇಂದ್ರಕ್ಕೆ ತೆರಳಿ ಸರ್ಕಾರಿ ಕೆಲಸಗಳನ್ನು ಮುಗಿಸಿಕೊಂಡು ಹಿಂದಿರುಗುವುದು ಕಷ್ಟಕರವಾಗಿದೆ. ಸಣ್ಣಪುಟ್ಟ ಕೆಲಸಗಳಿಗೂ ದೂರದ ಪ್ರಯಾಣ ಮಾಡಬೇಕಾಗಿರುವುದರಿಂದ ಸಮಯ ಹಾಗೂ ಹಣ ವ್ಯರ್ಥವಾಗುತ್ತಿದೆ ಎಂದು ವಿವರಿಸಿದರು.

ಇದಕ್ಕೆ ವಿರುದ್ಧವಾಗಿ ಗಾಣದಾಳದಿಂದ ಜಾಲಹಳ್ಳಿಗೆ ಕೇವಲ 6 ಕಿ.ಮೀ., ಕಮಲದಿನ್ನಿಯಿಂದ 3 ಕಿ.ಮೀ., ಕಕ್ಕಲದೊಡ್ಡಿಯಿಂದ 4 ಕಿ.ಮೀ. ಹಾಗೂ ಸುಣ್ಣದಕಲ್‌ನಿಂದ ಸುಮಾರು 10 ಕಿ.ಮೀ. ಅಂತರವಿದೆ. ದೇವದುರ್ಗ ತಾಲೂಕಿನ ಜಾಲಹಳ್ಳಿ ಹೋಬಳಿ ಕೇಂದ್ರವು ಈ ಗ್ರಾಮಗಳಿಗೆ ಭೌಗೋಳಿಕವಾಗಿ ಸಮೀಪದಲ್ಲಿದ್ದು, ಸಾರ್ವಜನಿಕರ ದೈನಂದಿನ ವ್ಯವಹಾರಗಳಿಗೂ ಅನುಕೂಲಕರವಾಗಿದೆ ಎಂದು ತಿಳಿಸಿದರು.

ಜಾಲಹಳ್ಳಿಯಲ್ಲಿ ಸಮುದಾಯ ಆರೋಗ್ಯ ಕೇಂದ್ರ, ಪೊಲೀಸ್ ಠಾಣೆ, ಪಶು ಚಿಕಿತ್ಸಾಲಯ, ಶಾಲಾ-ಕಾಲೇಜುಗಳು, ಬ್ಯಾಂಕ್‌ಗಳು, ವಿದ್ಯುತ್ ಕೇಂದ್ರ ಸೇರಿದಂತೆ ಅಗತ್ಯ ಮೂಲಸೌಕರ್ಯಗಳಿವೆ. ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಸಂಪರ್ಕವೂ ಇರುವುದರಿಂದ ಈ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರಿಸುವುದು ಆಡಳಿತಾತ್ಮಕವಾಗಿಯೂ ಜನಸಾಮಾನ್ಯರ ಹಿತದೃಷ್ಟಿಯಿಂದಲೂ ಸೂಕ್ತವಾಗಿದೆ ಎಂದು ಗ್ರಾಮಸ್ಥರು ಪ್ರತಿಪಾದಿಸಿದರು.

ವೃದ್ಧಾಪ್ಯ ವೇತನ, ವಿಧವಾ ವೇತನ, ಸಂಧ್ಯಾ ಸುರಕ್ಷಾಯೋಜನೆಸೇರಿದಂತೆ ವಿವಿಧಸಾಮಾಜಿಕ ಭದ್ರತಾ ಯೋಜನೆಗಳ ಫಲಾನುಭವಿಗಳು ಅರಕೇರಾ ತಾಲೂಕು ಕೇಂದ್ರಕ್ಕೆ ತೆರಳಲು ತೊಂದರೆ ಎದುರಿಸುತ್ತಿದ್ದಾರೆ. ವಿಶೇಷವಾಗಿ ವೃದ್ಧರು, ಅಂಗವಿಕಲರು ಹಾಗೂ ಮಹಿಳೆಯರಿಗೆ ದೂರದ ಪ್ರಯಾಣ ಸಮಸ್ಯೆಯಾಗಿದ್ದು, ಸರ್ಕಾರ ಈ ಕುರಿತು ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಸೆಕ್ಷನ್ 4(2)(ಎ) ಹಾಗೂ ಸಂಬಂಧಪಟ್ಟ ಕಾನೂನು ನಿಯಮಗಳ ಅನ್ವಯ ಗ್ರಾಮಗಳ ಮರುಸೇರ್ಪಡೆ ಬೇಡಿಕೆಯನ್ನು ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಆಗ್ರಹಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಮುಖಂಡ ರಂಗಣ್ಣ ಕೋರ್ಲ್ಕಾರ್ ಅರಕೇರಾ ತಾಲೂಕು ರಚನೆಯ ಸಂದರ್ಭದಲ್ಲಿ ಗ್ರಾಮಗಳ ಭೌಗೋಳಿಕ ಅಂತರ ಹಾಗೂ ಸಾರ್ವಜನಿಕರ ಅನುಕೂಲವನ್ನು ಸಮರ್ಪಕವಾಗಿ ಪರಿಗಣಿಸಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಅವೈಜ್ಞಾನಿಕ ತಾಲೂಕು ವಿಂಗಡಣೆಯಿಂದ ಗ್ರಾಮೀಣ ಜನತೆ ತೊಂದರೆ ಅನುಭವಿಸುವಂತಾಗಿದೆ ಎಂದು ಆರೋಪಿಸಿದರು.

ಮುಖಂಡ ಗಿರಿಯಪ್ಪ ಪೂಜಾರಿ ಮಾತನಾಡಿ, ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಲ್ಕು ಗ್ರಾಮಗಳನ್ನು ವಿಳಂಬ ಮಾಡದೆ ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಬೇಕು. ಸರ್ಕಾರ ಜನರ ಅಭಿಪ್ರಾಯಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಸಿದ್ಧನಗೌಡ ಮೂಡಲಗುಂಡ ಮಾತನಾಡಿ, ಗ್ರಾಮಗಳ ಭೌಗೋಳಿಕ ಪರಿಸ್ಥಿತಿ, ರಸ್ತೆ ಸಂಪರ್ಕ, ಸಾರಿಗೆ ವ್ಯವಸ್ಥೆ ಹಾಗೂ ಸಾರ್ವಜನಿಕರ ದೈನಂದಿನ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ತಾಲೂಕು ಮರುವಿಂಗಡಣೆ ಮಾಡಬೇಕು. ಅವೈಜ್ಞಾನಿಕ ವರದಿಗಳ ಆಧಾರದ ಮೇಲೆ ಕೈಗೊಂಡಿರುವ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ಗಾಣದಾಳ ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ 2025ರ ಮಾರ್ಚ್ 24ರಂದು ನಾಲ್ಕು ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸುವಂತೆ ನಿರ್ಣಯ ಅಂಗೀಕರಿಸಲಾಗಿದೆ. ಇದೀಗ ಸಾರ್ವಜನಿಕರ ಜನಾಭಿಪ್ರಾಯವನ್ನೂ ಸಂಗ್ರಹಿಸಿ, ಸಹಿ ಪಡೆದು ಸಭೆಯ ನಡಾವಳಿ ಸಿದ್ಧಪಡಿಸಲಾಗಿದೆ ಎಂದು ತಿಳಿಸಲಾಯಿತು.

ಸಭೆಯಲ್ಲಿ ಅರಕೇರಾ ತಹಶೀಲ್ದಾರ್ ಗ್ರೇಡ್-2 ಶ್ರೀಧರ ಪವಾರ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಂಗಮ್ಮ, ಕಾರ್ಯದರ್ಶಿ ಯಮನೂರಪ್ಪ, ಜಾಲಹಳ್ಳಿ ಪೊಲೀಸ್ ಠಾಣೆಯ ಪಿಎಸ್‌ಐ ವೈಶಾಲಿ, ವಕೀಲ ಬಸವರಾಜ ಗಾಣದಾಳ, ಸಾಬಣ್ಣ ಹೂಗಾರ್, ಸಾಬಣ್ಣ ಕಮಲದಿನ್ನಿ, ಮೌನೇಶ್ ಗಾಣದಾಳ, ಶಿವು ಪಾಟೀಲ್, ವೆಂಕಟರೆಡ್ಡಿ, ಶರಣಗೌಡ ಬೆನಕನ್, ಸುರೇಶ ಕಕ್ಕಲದೊಡ್ಡಿ, ಶಿವನಗೌಡ ದೇಸಾಯಿ, ಅಮರೇಗೌಡ ಕಮಲದಿನ್ನಿ, ಮಲ್ಲನಗೌಡ ದೇಸಾಯಿ, ಶಿವನಗೌಡ ಕಕ್ಕಲದೊಡ್ಡಿ, ಮಲ್ಲಿಕಾರ್ಜುನ ಬೆನಕನ್, ಚನ್ನಬಸವ ನಾಯಕ, ವಾಸುದೇವ ಮ್ಯಾಕಲ್ ದೊಡ್ಡಿ, ಅಯ್ಯನಗೌಡ ಮಾಸ್ತಿ, ನಿಂಗಯ್ಯ, ಚನ್ನಬಸವಗೌಡ, ಶರಣಗೌಡ, ಯಲ್ಲನಗೌಡ ದಳಪತಿ, ಎಂ.ಆರ್. ಬಸವ, ಅಮರೇಗೌಡ ಹೊಟ್ಟಿ, ಹನುಮಂತಪ್ಪ ಬಡಿಗೇರ್, ಸಲ್ಮಾನ್ ದೊಡ್ಮನಿ, ಶಾಂತಪ್ಪ ಮಾನಗೇರ ಸೇರಿದಂತೆ ನಾಲ್ಕು ಗ್ರಾಮಗಳ ಮುಖಂಡರು, ಮಹಿಳೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಮರುಸೇರ್ಪಡೆ ಮಾಡದಿದ್ದರೆ ಚುನಾವಣೆ ಬಹಿಷ್ಕಾರ: ವಸಂತಕುಮಾರ್ ಎಚ್ಚರಿಕೆ

ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಲ್ಕು ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸುವುದು ಗ್ರಾಮಸ್ಥರ ಒಕ್ಕೊರಲಿನ ಬೇಡಿಕೆಯಾಗಿದೆ. ಜನಾಭಿಪ್ರಾಯ ಸಂಗ್ರಹ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಗ್ರಾಮಸ್ಥರ ಬೇಡಿಕೆಗೆ ಮನ್ನಣೆ ನೀಡಿ ಶೀಘ್ರ ನಿರ್ಧಾರ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಚುನಾವಣೆ ಬಹಿಷ್ಕರಿಸುವ ಮೂಲಕ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಹೋರಾಟ ಸಮಿತಿ ಅಧ್ಯಕ್ಷ, ವಕೀಲ ವಸಂತಕುಮಾರ್ ಎಚ್ಚರಿಸಿದರು.

ಅರಕೇರಾಕ್ಕೆ ತೆರಳಲು ಮಹಿಳೆಯರು, ವೃದ್ಧರಿಗೆ ತೀವ್ರ ತೊಂದರೆ

ಅರಕೇರಾ ತಾಲೂಕು ಕೇಂದ್ರಕ್ಕೆ ತೆರಳಲು ಸಮರ್ಪಕ ಸಾರಿಗೆ ಸೌಲಭ್ಯವಿಲ್ಲದ ಕಾರಣ ಮಹಿಳೆಯರು ಹಾಗೂ ವೃದ್ಧರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆಯಲು ಮತ್ತು ಕಂದಾಯ ದಾಖಲೆಗಳಿಗೆ ಸಂಬಂಧಿಸಿದ ಕೆಲಸಗಳಿಗಾಗಿ ದೂರದ ಪ್ರಯಾಣ ಮಾಡಬೇಕಾಗಿದೆ. ಇದರಿಂದ ಆರ್ಥಿಕ ಹೊರೆ ಹೆಚ್ಚಾಗುವುದರ ಜೊತೆಗೆ ಸಮಯವೂ ವ್ಯರ್ಥವಾಗುತ್ತಿದೆ. ಮಹಿಳೆಯರು ಹಾಗೂ ವೃದ್ಧರ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಗಾಣದಾಳ ಸೇರಿದಂತೆ ನಾಲ್ಕು ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಬೇಕು ಎಂದು ಪಾರ್ವತಿ ಸೇರಿದಂತೆ ಸಭೆಯಲ್ಲಿ ಭಾಗವಹಿಸಿದ್ದ ಮಹಿಳೆಯರು ಒತ್ತಾಯಿಸಿದರು.

ಮುನ್ನೂರು ಕಾಪು ಸಮಾಜದಿಂದ ಸಾಹಿತಿ ವೀರಹನುಮಾನ, ಕಲಾವಿದ ಹೇಮರೆಡ್ಡಿ ಅವರಿಗೆ ಅದ್ದೂರಿ ಸನ್ಮಾನ: ಸಾಹಿತ್ಯ ಕ್ಷೇತ್ರದಲ್ಲಿ ವೀರಹನುಮಾನ ವಿಶಿಷ್ಟ ವ್ಯಕ್ತಿತ್ವದ ಸಾಧಕ -ಎನ್.ಎಸ್. ಬೋಸರಾಜು



ರಾಯಚೂರು, ನ. 7: ಕನ್ನಡ ಸಾಹಿತ್ಯ ಲೋಕಕ್ಕೆ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡಿರುವ ಹಿರಿಯ ಸಾಹಿತಿ ವೀರಹನುಮಾನ ಅವರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದು ರಾಯಚೂರು ಜಿಲ್ಲೆಯ ಸಮಸ್ತ ಸಾಹಿತಿಗಳಿಗೆ ಸಂದ ಗೌರವವಾಗಿದೆ. ಅವರ ಸಾಹಿತ್ಯ ಸಾಧನೆಯನ್ನು ರಾಜ್ಯ ಸರ್ಕಾರ ಗುರುತಿಸಿರುವುದು ಜಿಲ್ಲೆಯ ಸಾಂಸ್ಕೃತಿಕ ಕ್ಷೇತ್ರಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅಭಿಪ್ರಾಯಪಟ್ಟರು.

ನಗರದ ಮುನ್ನೂರುವಾಡಿ ಬಡಾವಣೆಯ ಲಕ್ಷ್ಮಿದೇವಿ ಕಲ್ಯಾಣ ಮಂಟಪದಲ್ಲಿ ಶನಿವಾರ ಮುನ್ನೂರು ಕಾಪು ಸಮಾಜದ ವತಿಯಿಂದ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ವೀರಹನುಮಾನ ಹಾಗೂ ರಾಜ್ಯ ವರ್ಣಕಲಾ ಪ್ರಶಸ್ತಿ ಪುರಸ್ಕೃತ ಕಲಾವಿದ ಹೇಮರೆಡ್ಡಿ ಎನ್. ಅವರ ಅಭಿನಂದನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಾಹಿತಿ ವೀರಹನುಮಾನ ಅವರು ಕೇವಲ ಸಾಹಿತ್ಯ ರಚನೆಗೆ ಸೀಮಿತವಾಗದೆ ಸಾಮಾಜಿಕ, ಸಾಂಸ್ಕೃತಿಕ ಹಾಗೂ ವೈಚಾರಿಕ ಕ್ಷೇತ್ರಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಸರಳತೆ, ಮಾನವೀಯ ಮೌಲ್ಯಗಳು ಹಾಗೂ ಎಲ್ಲ ಸಮುದಾಯಗಳೊಂದಿಗೆ ಸೌಹಾರ್ದಯುತ ಸಂಬಂಧ ಹೊಂದಿರುವ ಅವರ ವ್ಯಕ್ತಿತ್ವ ಇತರರಿಗೆ ಮಾದರಿಯಾಗಿದೆ. ಸಾಹಿತ್ಯದ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಜೊತೆಗೆ ಜನಸಾಮಾನ್ಯರೊಂದಿಗೆ ನಿರಂತರ ಸಂಪರ್ಕ ಹೊಂದಿರುವ ಅವರು ಸುಸಂಸ್ಕೃತ ವ್ಯಕ್ತಿತ್ವದ ನಾಯಕರಾಗಿ ಗುರುತಿಸಿಕೊಂಡಿದ್ದಾರೆ ಎಂದು ಬಣ್ಣಿಸಿದರು.

ಯಾವುದೇ ಪ್ರಶಸ್ತಿ ಅಥವಾ ಗೌರವಕ್ಕಾಗಿ ಹಂಬಲಿಸದೆ ತಮ್ಮ ಸಾಹಿತ್ಯ ಸೇವೆಯನ್ನೇ ಪ್ರಧಾನವಾಗಿ ಪರಿಗಣಿಸಿದ ವೀರಹನುಮಾನ ಅವರು ಎಂದಿಗೂ ರಾಜ್ಯೋತ್ಸವ ಪ್ರಶಸ್ತಿಗೆ ತಮ್ಮ ಹೆಸರನ್ನು ಶಿಫಾರಸು ಮಾಡುವಂತೆ ಯಾರನ್ನೂ ಸಂಪರ್ಕಿಸಿಲ್ಲ. ಅವರ ನಿರಂತರ ಸಾಹಿತ್ಯ ಕೃಷಿ, ಸಾಧನೆ ಹಾಗೂ ಕೊಡುಗೆಯನ್ನು ಪರಿಗಣಿಸಿ ರಾಜ್ಯ ಸರ್ಕಾರ ಪ್ರಶಸ್ತಿ ನೀಡಿರುವುದು ನಿಜವಾದ ಪ್ರತಿಭೆಗೆ ದೊರೆತ ಮನ್ನಣೆಯಾಗಿದೆ ಎಂದು ಹೇಳಿದರು.

ರಾಯಚೂರು ಜಿಲ್ಲೆಯ ಸಾಹಿತ್ಯ ಪರಂಪರೆಯನ್ನು ಶ್ರೀಮಂತಗೊಳಿಸುವಲ್ಲಿ ವೀರಹನುಮಾನ ಅವರ ಪಾತ್ರ ಮಹತ್ವದ್ದಾಗಿದೆ. ಅವರಿಗೆ ದೊರೆತಿರುವ ರಾಜ್ಯೋತ್ಸವ ಪ್ರಶಸ್ತಿ ವೈಯಕ್ತಿಕ ಸಾಧನೆಗೆ ಸಂದ ಗೌರವ ಮಾತ್ರವಲ್ಲದೆ ಜಿಲ್ಲೆಯ ಸಾಹಿತ್ಯ ಸಮುದಾಯದ ಹೆಮ್ಮೆಯ ಪ್ರತೀಕವಾಗಿದೆ ಎಂದು ತಿಳಿಸಿದರು.

ಮುನ್ನೂರು ಕಾಪು ಸಮಾಜವು ಸಾಮಾಜಿಕ ಸೇವೆಯ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಮುಂಚೂಣಿಯಲ್ಲಿದೆ. ಮುಂಗಾರು ಹಬ್ಬ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ನಾಡಿನ ಸಂಸ್ಕೃತಿ, ಕಲೆ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಸಮಾಜದ ಸಾಧಕರನ್ನು ಗುರುತಿಸಿ ಸಾರ್ವಜನಿಕವಾಗಿ ಗೌರವಿಸುವ ಇಂತಹ ಕಾರ್ಯಗಳು ಇತರ ಸಮುದಾಯಗಳಿಗೂ ಪ್ರೇರಣೆಯಾಗಿವೆ. ಈ ನಿಟ್ಟಿನಲ್ಲಿ ಮುನ್ನೂರು ಕಾಪು ಸಮಾಜವು ಸಾಂಸ್ಕೃತಿಕ ರಾಯಭಾರಿಯಂತೆ ಕಾರ್ಯನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು.

ಸಮಾರಂಭದಲ್ಲಿ ಮಾತನಾಡಿದ ರಾಯಚೂರು ನಗರ ಶಾಸಕ ಡಾ. ಶಿವರಾಜ ಪಾಟೀಲ್, ಕರ್ನಾಟಕದ ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ರಾಯಚೂರು ಜಿಲ್ಲೆಗೆ ವಿಶಿಷ್ಟ ಸ್ಥಾನವಿದೆ. ಮೈಸೂರಿನ ನಂತರ ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ರಾಯಚೂರು ಜಿಲ್ಲೆ ಮುಂಚೂಣಿಯಲ್ಲಿದೆ. ತೆಲಂಗಾಣ ಗಡಿಭಾಗದಲ್ಲಿರುವ ರಾಯಚೂರು ಜಿಲ್ಲೆ ಅನೇಕ ಪ್ರತಿಭಾವಂತ ಸಾಹಿತಿಗಳು, ಕಲಾವಿದರು ಹಾಗೂ ಸಾಂಸ್ಕೃತಿಕ ಸಾಧಕರನ್ನು ನಾಡಿಗೆ ಪರಿಚಯಿಸಿರುವ ಹೆಗ್ಗಳಿಕೆ ಹೊಂದಿದೆ ಎಂದರು.

ಸಾಹಿತ್ಯ ಕ್ಷೇತ್ರದಲ್ಲಿ ನಿರಂತರ ಪರಿಶ್ರಮ ಮತ್ತು ಸಾಧನೆಯ ಮೂಲಕ ತಮ್ಮದೇ ಆದ ಗುರುತು ಮೂಡಿಸಿರುವ ವೀರಹನುಮಾನ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ದೊರೆತಿರುವುದು ಜಿಲ್ಲೆಯ ಜನತೆಗೆ ಸಂತಸ ತಂದಿದೆ. ಇಂತಹ ಸಾಧಕರನ್ನು ಗುರುತಿಸಿ ಗೌರವಿಸುವುದರಿಂದ ಯುವ ಪೀಳಿಗೆಯಲ್ಲಿ ಸಾಹಿತ್ಯ ಮತ್ತು ಕಲೆಯ ಬಗ್ಗೆ ಆಸಕ್ತಿ ಹೆಚ್ಚುತ್ತದೆ. ಜಿಲ್ಲೆಯ ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ. ಶಾಂತಪ್ಪ ಮಾತನಾಡಿ, ರಾಜ್ಯೋತ್ಸವ ಪ್ರಶಸ್ತಿ ಕರ್ನಾಟಕ ಸರ್ಕಾರ ನೀಡುವ ಪ್ರತಿಷ್ಠಿತ ಗೌರವಗಳಲ್ಲಿ ಒಂದಾಗಿದೆ. ಹಿರಿಯ ಸಾಹಿತಿ ವೀರಹನುಮಾನ ಅವರ ಸುದೀರ್ಘ ಸಾಹಿತ್ಯ ಸೇವೆಯನ್ನು ಗುರುತಿಸಿ ಸರ್ಕಾರ ಈ ಗೌರವ ನೀಡಿರುವುದು ಪ್ರಶಸ್ತಿಯ ಘನತೆಯನ್ನು ಮತ್ತಷ್ಟು ಹೆಚ್ಚಿಸಿದೆ. ಇಂತಹ ಸಾಧಕರನ್ನು ಸಮಾಜದ ವತಿಯಿಂದ ಸನ್ಮಾನಿಸುತ್ತಿರುವುದು ಅಭಿನಂದನಾರ್ಹ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಿರಿಯ ಸಾಹಿತಿಗಳು ತಮ್ಮ ಅನುಭವ ಮತ್ತು ಜ್ಞಾನವನ್ನು ಯುವ ಬರಹಗಾರರೊಂದಿಗೆ ಹಂಚಿಕೊಳ್ಳಬೇಕು. ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳಲ್ಲಿರುವ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಸಾಹಿತ್ಯ ಕ್ಷೇತ್ರಕ್ಕೆ ಹೊಸ ತಲೆಮಾರಿನ ಬರಹಗಾರರನ್ನು ಪರಿಚಯಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ರಾಜ್ಯ ವರ್ಣಕಲಾ ಪ್ರಶಸ್ತಿ ಪುರಸ್ಕೃತ ಕಲಾವಿದ ಹೇಮರೆಡ್ಡಿ ಎನ್. ಅವರ ಸಾಧನೆಯನ್ನು ಗಣ್ಯರು ಪ್ರಶಂಸಿಸಿದರು. ದೈಹಿಕ ಅಂಗವೈಕಲ್ಯವನ್ನು ತಮ್ಮ ಕಲಾಸಾಧನೆಗೆ ಅಡ್ಡಿಯಾಗದಂತೆ ಎದುರಿಸಿ, ವರ್ಣಕಲೆಯ ಮೂಲಕ ವಿಶಿಷ್ಟ ಪ್ರತಿಭೆ ಪ್ರದರ್ಶಿಸಿರುವ ಹೇಮರೆಡ್ಡಿ ಅವರು ಇತರರಿಗೆ ಸ್ಫೂರ್ತಿಯಾಗಿದ್ದಾರೆ. ಅವರ ಕಲಾ ಸಾಧನೆಯನ್ನು ಗುರುತಿಸಿ ರಾಜ್ಯಮಟ್ಟದ ಪ್ರಶಸ್ತಿ ನೀಡಿರುವುದು ರಾಯಚೂರು ಜಿಲ್ಲೆಗೆ ಮತ್ತೊಂದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುನ್ನೂರು ಕಾಪು ಸಮಾಜದ ವತಿಯಿಂದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ವೀರಹನುಮಾನ ಹಾಗೂ ರಾಜ್ಯ ವರ್ಣಕಲಾ ಪ್ರಶಸ್ತಿ ಪುರಸ್ಕೃತ ಹೇಮರೆಡ್ಡಿ ಎನ್. ಅವರನ್ನು ಗಣ್ಯರ ಸಮ್ಮುಖದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡ ಹಾಗೂ ಮಾಜಿ ಶಾಸಕ ಎ. ಪಾಪಾರೆಡ್ಡಿ, ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ, ಯು. ಕೃಷ್ಣಮೂರ್ತಿ, ಕೆ. ಶಾಂತಪ್ಪ, ಜಯವಂತರಾವ್ ಪತಂಗಿ, ಮಹಾಂತೇಶ್ ಮಸ್ಕಿ, ಗಾಧರ ಬೆಟ್ಟಪ್ಪ, ಜಯಣ್ಣ, ಮಹಮ್ಮದ್ ಶಾಲಂ ಸೇರಿದಂತೆ ಸಮಾಜದ ಮುಖಂಡರು, ಸಾಹಿತಿಗಳು, ಕಲಾವಿದರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಕೊನೆಯ ವಂತಿನ ಕಾಲುವೆ ನೀರು ಸಮರ್ಪಕ ಹಂಚಿಕೆಗೆ ಕ್ರಮ: ತಹಶೀಲ್ದಾರ್ ಭೀಮರಾಯ ರಾಮಸಮುದ್ರ



ಮಾನ್ವಿ: ನೀರಾವರಿ ಸಲಹಾ ಸಮಿತಿಯ ನಿರ್ಣಯದಂತೆ ಕೊನೆಯ ವಂತಿನ ನೀರನ್ನು ತಾಲೂಕಿನ ವಿವಿಧ ಉಪಕಾಲುವೆಗಳ ವ್ಯಾಪ್ತಿಯ ರೈತರ ಜಮೀನುಗಳಿಗೆ ಸಮರ್ಪಕವಾಗಿ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ವಿಶೇಷವಾಗಿ ಜೋಳದ ಬೆಳೆ ರಕ್ಷಣೆಗೆ ಆದ್ಯತೆ ನೀಡಲಾಗುವುದು ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ತಿಳಿಸಿದರು.

ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ಕಾಲುವೆ ನೀರು ಹಂಚಿಕೆ ಕುರಿತು ಆಯೋಜಿಸಿದ್ದ ರೈತರ ಸಭೆಯಲ್ಲಿ ಅವರು ಮಾತನಾಡಿದರು.

ಕಾಲುವೆ ನೀರಿನ ಸಮರ್ಪಕ ಹಂಚಿಕೆಗಾಗಿ ಗ್ರಾಮ ಆಡಳಿತಾಧಿಕಾರಿಗಳು, ಕಂದಾಯ ನಿರೀಕ್ಷಕರು ಹಾಗೂ ಪೊಲೀಸ್ ಸಿಬ್ಬಂದಿಯನ್ನು ಕಾಲುವೆಗಳ ಮೇಲ್ವಿಚಾರಣೆಗೆ ನಿಯೋಜಿಸಲಾಗುವುದು. ಅಕ್ರಮವಾಗಿ ಕಾಲುವೆಯಿಂದ ನೀರು ಪಡೆದುಕೊಳ್ಳುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ಕೊನೆಯ ಭಾಗದ ರೈತರಿಗೂ ನೀರು ತಲುಪುವಂತೆ ನೋಡಿಕೊಳ್ಳಲು ರೈತರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಸಿರವಾರ ನೀರಾವರಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ವಿಜಯಲಕ್ಷ್ಮೀ ಮಾತನಾಡಿ, ನೀರಾವರಿ ಸಲಹಾ ಸಮಿತಿಯ ನಿರ್ಣಯದಂತೆ ಪ್ರತಿ ಉಪಕಾಲುವೆಗೆ ಮೂರು ದಿನಗಳಂತೆ ಸರದಿ ಪದ್ಧತಿಯಲ್ಲಿ ನೀರು ಹರಿಸಿ ನಂತರ ಬಂದ್ ಮಾಡಲಾಗುವುದು. ಎಡದಂಡೆ ಕಾಲುವೆಯಲ್ಲಿ ಅಗತ್ಯ ಪ್ರಮಾಣದ ನೀರಿನ ಮಟ್ಟ ಲಭ್ಯವಾಗದಿರುವುದು ಹಾಗೂ ಸಿಬ್ಬಂದಿ ಕೊರತೆಯ ನಡುವೆಯೂ ಉಳಿದಿರುವ ಒಂಬತ್ತು ದಿನಗಳಲ್ಲಿ ನೀರನ್ನು ಸಮರ್ಪಕವಾಗಿ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

82ನೇ ಉಪಕಾಲುವೆಯ ಪಿಂ 189ರವರೆಗಿನ ವ್ಯಾಪ್ತಿಯ ಗವಿಗಟ್ಟ ಹಾಗೂ ತಾಯಮ್ಮ ಕಟ್ಟೆ ಭಾಗದ ಜೋಳದ ಬೆಳೆಗಳಿಗೆ ಆದ್ಯತೆ ನೀಡಿ ಮಂಗಳವಾರದಿಂದ ಮೂರು ದಿನಗಳ ಕಾಲ ಸರದಿ ಪದ್ಧತಿಯಲ್ಲಿ ನೀರು ಹರಿಸಲಾಗುವುದು. 89ನೇ ಉಪಕಾಲುವೆ ವ್ಯಾಪ್ತಿಯ ನೀರಾಮಾನ್ವಿ, ಬೆಟ್ಟದೂರು ಹಾಗೂ ಬೆಟ್ಟದೂರು ತಾಂಡಾಗಳಿಗೆ ಸೋಮವಾರದಿಂದ ಶುಕ್ರವಾರದವರೆಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಅದೇ ರೀತಿ 82ನೇ ಉಪಕಾಲುವೆಯ ಕೆಳಭಾಗದ ಜಾನೇಕಲ್, ಮಲ್ಲಿನಮಡಗು ಹಾಗೂ ನಸ್ಲಾಪುರ ವ್ಯಾಪ್ತಿಯ ರೈತರ ಜಮೀನುಗಳಿಗೆ ಮಂಗಳವಾರದಿಂದ ಮೂರು ದಿನಗಳ ಕಾಲ ನೀರು ಹರಿಸಲಾಗುವುದು ಎಂದು ಮಾಹಿತಿ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ್ ಮಾತನಾಡಿ, ಉಪಕಾಲುವೆಗಳಲ್ಲಿ ನೀರಿನ ಮಟ್ಟವನ್ನು ಸಮರ್ಪಕವಾಗಿ ನಿರ್ವಹಿಸುತ್ತಿಲ್ಲ. ಮುಖ್ಯ ಕಾಲುವೆಯಲ್ಲಿ 4.1 ಮೀಟರ್ ನೀರಿನ ಮಟ್ಟ ಕಾಯ್ದುಕೊಂಡಾಗ ಮಾತ್ರ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ತಲುಪಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕೆಲವರು ಟ್ರ್ಯಾಕ್ಟರ್ ಪಂಪ್‌ಗಳನ್ನು ಬಳಸಿ ಕಾಲುವೆಯಿಂದ ಅಕ್ರಮವಾಗಿ ನೀರು ಪಡೆದುಕೊಳ್ಳುತ್ತಿದ್ದಾರೆ. ಅಲ್ಲದೆ, ಕಾಲುವೆ ನೀರನ್ನು ಬಳಸಿ ಕೆರೆಗಳನ್ನು ತುಂಬಿಸಿಕೊಳ್ಳಲಾಗುತ್ತಿದೆ. ಇಂತಹ ಅಕ್ರಮಗಳ ವಿರುದ್ಧ ನೀರಾವರಿ ಇಲಾಖೆ ಸೂಕ್ತ ಕ್ರಮ ಕೈಗೊಳ್ಳದಿರುವುದರಿಂದ ಕೊನೆಯ ಭಾಗದ ರೈತರಿಗೆ ನೀರು ತಲುಪುತ್ತಿಲ್ಲ ಎಂದು ಆರೋಪಿಸಿದರು.

ಉಳಿದಿರುವ 12 ದಿನಗಳಲ್ಲಿ ಈ ಭಾಗದ ಜೋಳ ಹಾಗೂ ಮೆಣಸಿನಕಾಯಿ ಬೆಳೆಗಳಿಗೆ ಕೊನೆಯ ವಂತಿನ ನೀರು ತಲುಪದಿದ್ದರೆ ರೈತರು ತೀವ್ರ ಆರ್ಥಿಕ ನಷ್ಟ ಅನುಭವಿಸಬೇಕಾಗುತ್ತದೆ. ಆದ್ದರಿಂದ ಅಧಿಕಾರಿಗಳು ನೀರು ಹಂಚಿಕೆಯಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಎಲ್ಲ ರೈತರಿಗೂ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಪೊಲೀಸ್ ಇನ್‌ಸ್ಪೆಕ್ಟರ್ ಸೋಮಶೇಖರ ಎಸ್. ಕೆಂಚರೆಡ್ಡಿ, ರೈತ ಮುಖಂಡರಾದ ದೊಡ್ಡಬಸವನಗೌಡ ಬಲ್ಲಟ್ಟಗಿ, ಸೂಗೂರಯ್ಯ ಆರ್.ಎಸ್. ಮಠ, ಬಸವನಗೌಡ ಮಲ್ಲಿನಮಡಗು, ಲಿಂಗಣ್ಣ ಪಾಟೀಲ್, ಬಸವನಗೌಡ ಮಾಲಿಪಾಟೀಲ್ ಬೆಟ್ಟದೂರು, ಶಂಕ್ರಪ್ಪಗೌಡ ದೇವತಗಲ್, ಕಾಡಪ್ಪ, ಶರಣಪ್ಪ, ವಿಕ್ರಮಗೌಡ ಗವಿಗಟ್ಟ, ಉಮೇಶ ಬೆಟ್ಟದೂರು, ಸಿದ್ದನಗೌಡ, ಕುಂಬಾರ ಮಾಯಪ್ಪ, ಮಲ್ಲಿಕಾರ್ಜುನಗೌಡ ಮಾಲಿಪಾಟೀಲ್, ಡಿ. ರಾಮಕೃಷ್ಣ, ಎಂ. ಶ್ರೀನಿವಾಸ, ಕೆ. ಬುಡ್ಡಣ್ಣ, ರುದ್ರಮೂರ್ತಿ, ಚನ್ನಬಸವ, ಮಹಾಂತೇಶ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಪೋತ್ನಾಳದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕೆ ಸ್ಥಳ ಪರಿಶೀಲಿಸಿದ ತಹಶೀಲ್ದಾರ್



ಮಾನ್ವಿ: ತಾಲೂಕಿನ ಪೋತ್ನಾಳ ಗ್ರಾಮದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಸಾಮೂಹಿಕ ಶೌಚಾಲಯ ನಿರ್ಮಿಸುವ ಕುರಿತು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರು ಬಸ್ ನಿಲ್ದಾಣದ ಸಮೀಪದ ಖಾಲಿ ಜಾಗವನ್ನು ಪರಿಶೀಲಿಸಿದರು.

ಪೋತ್ನಾಳ ಗ್ರಾಮ ಪಂಚಾಯಿತಿ ಆವರಣದಲ್ಲಿ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಗ್ರಾಮದ ಸಾಮಾಜಿಕ ಕಾರ್ಯಕರ್ತ ಶರಣಕುಮಾರ ಮುದ್ದಂಗುಡ್ಡಿ ಅವರು ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವಂತೆ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಪೋತ್ನಾಳ ಗ್ರಾಮವು ಸುತ್ತಮುತ್ತಲಿನ 48 ಗ್ರಾಮಗಳ ಜನರಿಗೆ ಪ್ರಮುಖ ಕೇಂದ್ರವಾಗಿದ್ದು, ವಿವಿಧ ಕೆಲಸಗಳಿಗಾಗಿ ಪ್ರತಿದಿನ ಸಾವಿರಾರು ಜನರು ಗ್ರಾಮಕ್ಕೆ ಆಗಮಿಸುತ್ತಾರೆ. ಆದರೆ ಸಾರ್ವಜನಿಕರಿಗೆ ಅಗತ್ಯವಾದ ಶೌಚಾಲಯ, ಸುಸಜ್ಜಿತ ಬಸ್ ನಿಲ್ದಾಣ ಹಾಗೂ ಕುಡಿಯುವ ನೀರಿನ ಸೌಲಭ್ಯಗಳ ಕೊರತೆಯಿದೆ. ಇದರಿಂದ ಪ್ರಯಾಣಿಕರು, ಮಹಿಳೆಯರು, ವೃದ್ಧರು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ ಎಂದು ಮನವಿಯಲ್ಲಿ ತಿಳಿಸಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ಗ್ರಾಮದಲ್ಲಿ ಸುಸಜ್ಜಿತ ಬಸ್ ನಿಲ್ದಾಣ, ಸಾಮೂಹಿಕ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ಕೆರೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮನವಿಗೆ ಸ್ಪಂದಿಸಿದ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರು ಪೋತ್ನಾಳ ಬಸ್ ನಿಲ್ದಾಣದ ಸಮೀಪದಲ್ಲಿರುವ ಖಾಲಿ ಜಾಗಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರ ತುರ್ತು ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ತಾತ್ಕಾಲಿಕ ಶೌಚಾಲಯ ನಿರ್ಮಿಸುವ ಸಾಧ್ಯತೆಗಳ ಕುರಿತು ಪರಿಶೀಲಿಸಿದರು.

ಅಲ್ಲದೆ, ಸುಸಜ್ಜಿತ ಬಸ್ ನಿಲ್ದಾಣ ಹಾಗೂ ಕುಡಿಯುವ ನೀರಿಗಾಗಿ ಕೆರೆ ನಿರ್ಮಾಣ ಸೇರಿದಂತೆ ಮನವಿಯಲ್ಲಿರುವ ಇತರ ಬೇಡಿಕೆಗಳ ಕುರಿತು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಕ್ತರ್ ಪಾಷಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಿಡಿಲು ಬಡಿದು ಮೃತಪಟ್ಟ ರೈತ ಪ್ರಭಣ್ಣ ಕುಟುಂಬಕ್ಕೆ ₹5 ಲಕ್ಷ ಪರಿಹಾರ ವಿತರಿಸಿದ ಶಾಸಕ ದದ್ದಲ್



ಮಾನ್ವಿ: ತಾಲೂಕಿನ ಹರನಹಳ್ಳಿ ಗ್ರಾಮದಲ್ಲಿ ಇತ್ತೀಚೆಗೆ ಕೃಷಿ ಚಟುವಟಿಕೆಯಲ್ಲಿ ತೊಡಗಿದ್ದ ವೇಳೆ ಸಿಡಿಲು ಬಡಿದು ಮೃತಪಟ್ಟ ರೈತ ಪ್ರಭಣ್ಣ ಅವರ ಕುಟುಂಬಕ್ಕೆ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರು ಸರ್ಕಾರದ ವತಿಯಿಂದ ಮಂಜೂರಾದ ₹5 ಲಕ್ಷ ಪರಿಹಾರದ ಚೆಕ್ ವಿತರಿಸಿದರು.

ಹರನಹಳ್ಳಿ ಗ್ರಾಮದಲ್ಲಿರುವ ಮೃತ ರೈತ ಪ್ರಭಣ್ಣ ಅವರ ನಿವಾಸಕ್ಕೆ ಭೇಟಿ ನೀಡಿದ ಶಾಸಕರು, ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು. ಅನಿರೀಕ್ಷಿತವಾಗಿ ಸಂಭವಿಸಿದ ಪ್ರಕೃತಿ ವಿಕೋಪದಿಂದ ಕುಟುಂಬದ ಆಧಾರಸ್ತಂಭವನ್ನು ಕಳೆದುಕೊಂಡಿರುವುದು ನೋವಿನ ಸಂಗತಿಯಾಗಿದೆ ಎಂದು ಸಂತಾಪ ವ್ಯಕ್ತಪಡಿಸಿದರು.

ಸರ್ಕಾರದಿಂದ ಮಂಜೂರಾದ ₹5 ಲಕ್ಷ ಪರಿಹಾರದ ಚೆಕ್ ಅನ್ನು ಮೃತ ರೈತನ ಕುಟುಂಬದ ಸದಸ್ಯರಿಗೆ ಹಸ್ತಾಂತರಿಸಿದ ಅವರು, ಸಂಕಷ್ಟದಲ್ಲಿರುವ ಕುಟುಂಬಕ್ಕೆ ಸರ್ಕಾರದ ವತಿಯಿಂದ ಅಗತ್ಯ ನೆರವು ಒದಗಿಸುವ ಭರವಸೆ ನೀಡಿದರು.

ಇದೇ ಘಟನೆಯಲ್ಲಿ ಸಿಡಿಲು ಬಡಿದು ಗಾಯಗೊಂಡಿರುವ ನಾಲ್ವರ ಆರೋಗ್ಯದ ಬಗ್ಗೆಯೂ ವಿಚಾರಿಸಿದ ಶಾಸಕರು, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ಕಂದಾಯ ನಿರೀಕ್ಷಕ ಹನುಮಂತಪ್ಪ ಜಲ್ಲಿ, ಮುಖಂಡ ಮೌನೇಶ ನಾಯಕ ಸೇರಿದಂತೆ ಗ್ರಾಮದ ಹಿರಿಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಜಿಲ್ಲೆಯ ಸಾಹಿತಿಗಳ ಪರಿಚಯ ಪುಸ್ತಕ ಪ್ರಕಟಣೆಗೆ ಮಾಹಿತಿ ಆಹ್ವಾನ: ಕೆ. ವಿಜಯಲಕ್ಷ್ಮೀ



ಮಾನ್ವಿ: ರಾಯಚೂರು ಜಿಲ್ಲೆಯ ಕನ್ನಡ ಸೇರಿದಂತೆ ವಿವಿಧ ಭಾಷೆಗಳಲ್ಲಿ ಸಾಹಿತ್ಯ ಕೃಷಿ ಮಾಡಿರುವ ಸಾಹಿತಿಗಳು, ಲೇಖಕರು, ಕವಿಗಳು, ವಿಮರ್ಶಕರು ಹಾಗೂ ಚಿಂತಕರ ಸಮಗ್ರ ಮಾಹಿತಿಯನ್ನು ಒಳಗೊಂಡ ಪರಿಚಯ ಪುಸ್ತಕವನ್ನು ಹೊರತರಲು ಉದ್ದೇಶಿಸಲಾಗಿದ್ದು, ಸಂಬಂಧಪಟ್ಟವರಿಂದ ಮಾಹಿತಿ ಆಹ್ವಾನಿಸಲಾಗಿದೆ ಎಂದು ಪಟ್ಟಣದ ನೇತಾಜಿ ಪ್ರಕಾಶನದ ಮುಖ್ಯಸ್ಥೆ ಕೆ. ವಿಜಯಲಕ್ಷ್ಮೀ ತಿಳಿಸಿದ್ದಾರೆ.

ನೇತಾಜಿ ಪ್ರಕಾಶನದ ವತಿಯಿಂದ ಹೊಸಗನ್ನಡ ಸಾಹಿತ್ಯದ ಅರುಣೋದಯ ಕಾಲದಿಂದ ಜಾಗತೀಕರಣದ ಇಂದಿನ ಯುಗದವರೆಗೆ ವಿವಿಧ ಸಾಹಿತ್ಯ ಪ್ರಕಾರಗಳಲ್ಲಿ ಕೃಷಿ ಮಾಡಿರುವ ರಾಯಚೂರು ಜಿಲ್ಲೆಯ ಸಾಹಿತಿಗಳು, ಬರಹಗಾರರು ಹಾಗೂ ಅವರ ಸಾಹಿತ್ಯ ಕೃತಿಗಳ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಿ ಪರಿಚಯ ಪುಸ್ತಕ ಪ್ರಕಟಿಸಲು ಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಜನಿಸಿ ಪ್ರಸ್ತುತ ಜಿಲ್ಲೆಯ ಹೊರಗೆ ನೆಲೆಸಿರುವ ಸಾಹಿತಿಗಳು, ಲೇಖಕರು, ಕವಿಗಳು, ವಿಮರ್ಶಕರು, ಚಿಂತಕರು ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಸಮಾಜಸೇವಕರ ಮಾಹಿತಿಯನ್ನೂ ಪುಸ್ತಕದಲ್ಲಿ ದಾಖಲಿಸಲು ಉದ್ದೇಶಿಸಲಾಗಿದೆ. ಕನಿಷ್ಠ ಒಂದು ಪುಸ್ತಕವನ್ನಾದರೂ ಪ್ರಕಟಿಸಿರುವ ಲೇಖಕರು ತಮ್ಮ ವೈಯಕ್ತಿಕ ಪರಿಚಯ, ಸಾಹಿತ್ಯ ಸಾಧನೆ ಹಾಗೂ ಪ್ರಕಟಿತ ಕೃತಿಗಳ ಸಂಪೂರ್ಣ ವಿವರಗಳನ್ನು ಕಳುಹಿಸಿಕೊಡಬಹುದು ಎಂದು ತಿಳಿಸಿದ್ದಾರೆ.

ಅಲ್ಲದೆ, ಸಾಹಿತಿಗಳ ಕುಟುಂಬದ ಸದಸ್ಯರು, ಆಪ್ತರು ಹಾಗೂ ಸಾಹಿತ್ಯಾಸಕ್ತರು ತಮ್ಮ ಪರಿಚಯದಲ್ಲಿರುವ ಲೇಖಕರು ಮತ್ತು ಸಾಹಿತಿಗಳ ಕುರಿತು ಮಾಹಿತಿ ಹೊಂದಿದ್ದರೆ ಅದನ್ನೂ ಪ್ರಕಾಶನಕ್ಕೆ ಕಳುಹಿಸಬಹುದು. ಜಿಲ್ಲೆಯ ಸಾಹಿತ್ಯ ಪರಂಪರೆ, ವಿವಿಧ ಭಾಷೆಗಳ ಸಾಹಿತ್ಯಿಕ ಕೊಡುಗೆ ಹಾಗೂ ಸಾಹಿತಿಗಳ ಸಾಧನೆಗಳನ್ನು ಒಂದೇ ಪುಸ್ತಕದಲ್ಲಿ ದಾಖಲಿಸುವುದು ಈ ಪ್ರಯತ್ನದ ಉದ್ದೇಶವಾಗಿದೆ ಎಂದು ವಿವರಿಸಿದ್ದಾರೆ.

ಆಸಕ್ತರು ತಮ್ಮ ವೈಯಕ್ತಿಕ ಪರಿಚಯ ಹಾಗೂ ಪ್ರಕಟಿತ ಸಾಹಿತ್ಯ ಕೃತಿಗಳ ಸಂಪೂರ್ಣ ಮಾಹಿತಿಯನ್ನು ನೇತಾಜಿ ಪ್ರಕಾಶನ, ಕೆ.ಜಿ. ರಸ್ತೆ, ನೇತಾಜಿ ನಗರ, ಮಾನ್ವಿ584123 ವಿಳಾಸಕ್ಕೆ ಕಳುಹಿಸಿಕೊಡಬೇಕು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9880706628 ಸಂಪರ್ಕಿಸಬಹುದು ಎಂದು ಕೆ. ವಿಜಯಲಕ್ಷ್ಮೀ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ. 12 ರಂದು ಮಕ್ಕಳ ದಿನಾಚರಣೆ ಕಾರ್ಯಕ್ರಮ ವಿವಿಧ ಸ್ಪರ್ಧೆಗಳ ಆಯೋಜನೆ: ಹೆಸರು ನೋಂದಣಿಗೆ ಆಹ್ವಾನ

ರಾಯಚೂರು ನ.7.(ಕರ್ನಾಟಕ ವಾರ್ತೆ):- ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ರಾಯಚೂರು ಇವರ ಜಂಟಿ ಆಶ್ರಯದಲ್ಲಿ ಜಿಲ್ಲಾ ಬಾಲ ಭವನ ಸೊಸೈಟಿ ರಾಯಚೂರು ವತಿಯಿಂದ 12.ನವೆಂಬ.ೞ2026 ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ 09 ರಿಂದ 16 ವರ್ಷದೊಳಗಿನ ಸರ್ಕಾರಿ ಹಾಗೂ ಖಾಸಗಿ ಶಾಲಾ ಮಕ್ಕಳು, ಗ್ರಾಮೀಣ ಪ್ರದೇಶದ ಮಕ್ಕಳು, ಸೌಲಭ್ಯ ವಂಚಿತ ಮಕ್ಕಳು, ವಿಶೇಷ ಚೇತನ ಮಕ್ಕಳು, ಬಾಲಕ-ಬಾಲಕಿಯರ ಬಾಲಮಂದಿರದ ಮಕ್ಕಳು ಹಾಗೂ ಸರ್ಕಾರಿ ಸುಧಾರಣಾ ಸಂಸ್ಥೆಯ ಮಕ್ಕಳಿಗೆ ಮೊದಲ ಆದ್ಯತೆಯ ಮೇರೆಗೆ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಶಿಬಿರದಲ್ಲಿ ಆಯೋಜಿಸಲಾಗುವ ಪ್ರಮುಖ ಚಟುವಟಿಕೆಗಳು ಹಾಗೂ ಸ್ಪರ್ಧೆಗಳು, ಸೃಜನಾತ್ಮಕ ಕಲೆ: ಚಿತ್ರಕಲೆ, ಕರಕುಶಲ ಕಲೆ ಹಾಗೂ ಜೇಡಿಮಣ್ಣಿನ ಕಲೆ. ಸೃಜನಾತ್ಮಕ ಬರವಣಿಗೆ: ಕಥೆ, ಕವನ ಹಾಗೂ ಪ್ರಬಂಧ ಬರಹ. ಸೃಜನಾತ್ಮಕ ಪ್ರದರ್ಶನ ಕಲೆ: ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ ಮತ್ತು ಯೋಗ. ವಿಜ್ಞಾನ: ನೂತನ ಆವಿಷ್ಕಾರ ಹಾಗೂ ಪ್ರಯೋಗಗಳು. ಇವುಗಳೊಂದಿಗೆ, ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಬಡವರ ಬದುಕಿನಲ್ಲಿ ಆದ ಸಕಾರಾತ್ಮಕ ಬೆಳವಣಿಗೆ ಎಂಬ ವಿಷಯದ ಕುರಿತು ವಿಶೇಷ ಭಾಷಣ ಸ್ಪರ್ಧೆಯನ್ನು ಆಯೋಜಿಸಲಾಗುವುದು. 16 ವರ್ಷದೊಳಗಿನ ಒಬ್ಬ ಅತ್ಯುತ್ತಮ ಅಭ್ಯರ್ಥಿಯನ್ನು ಜಿಲ್ಲಾ/ತಾಲೂಕು ಮಟ್ಟದಲ್ಲಿ ಆಯ್ಕೆ ಮಾಡಿ, ಅವರ ಭಾಷಣದ ವಿಡಿಯೋ ಚಿತ್ರೀಕರಿಸಿ ವಾಟ್ಸಾಪ್ ಗ್ರೂಪ್‌ಗಳಲ್ಲಿ ಪ್ರಸಾರ ಮಾಡಲಾಗುವುದು.

ಆಸಕ್ತ ಮಕ್ಕಳು 11.ನವೆಂಬ.ೞ2026 ರ ಸಂಜೆ 5:00 ಗಂಟೆಯೊಳಗಾಗಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಬಾಲ ಭವನದ ಕಾರ್ಯಕ್ರಮ ಸಂಯೋಜಕರಾದ ದೀಪಾ (ಮೊ: 966343137) ಅಥವಾ ಕಚೇರಿ ಸಹಾಯಕರಾದ ತಾರಮ್ಮ (ಮೊ: 9900409171) ಅವರ ಮೊಬೈಲ್ ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದ ಮಕ್ಕಳಲ್ಲಿ ಶಿಸ್ತು, ಸೇವಾ ಮನೋಭಾವ ವೃದ್ಧಿ: ಎಸ್. ಶರಣೇಗೌಡ



ಸಿಂಧನೂರು, ನ. 7: ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಯಮ, ನಾಯಕತ್ವ ಗುಣ ಹಾಗೂ ಸಮಾಜಸೇವೆಯ ಮನೋಭಾವ ಬೆಳೆಸುವಲ್ಲಿ ಸ್ಕೌಟ್ಸ್ ಮತ್ತು ಗೈಡ್ ್ಸ ಚಟುವಟಿಕೆಗಳು ಮಹತ್ವದ ಪಾತ್ರ ವಹಿಸುತ್ತವೆ. ವಿದ್ಯಾರ್ಥಿಗಳು ಪಠ್ಯ ಶಿಕ್ಷಣದೊಂದಿಗೆ ಇಂತಹ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ತಾಲೂಕು ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಮಿತಿಯ ಅಧ್ಯಕ್ಷ ಎಸ್. ಶರಣೇಗೌಡ ಹೇಳಿದರು.

ನಗರದ ಪಿಎಂಶ್ರೀ ಆದರ್ಶ ವಿದ್ಯಾಲಯದಲ್ಲಿ ಶನಿವಾರ ಶಾಲೆಯ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದ ವತಿಯಿಂದ ಆಯೋಜಿಸಿದ್ದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಶಿಸ್ತುಬದ್ಧ ಜೀವನಶೈಲಿ, ಸಮಯಪ್ರಜ್ಞೆ, ಸಹಕಾರ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಉದ್ದೇಶದಿಂದ ಆರಂಭವಾದ ಸ್ಕೌಟ್ಸ್ ಮತ್ತು ಗೈಡ್ಸ್ ಚಳವಳಿ ಇಂದು ವಿಶ್ವಾದ್ಯಂತ ವ್ಯಾಪಕವಾಗಿ ಬೆಳೆದಿದೆ. ಸಣ್ಣ ಪ್ರಮಾಣದಲ್ಲಿ ಆರಂಭಗೊಂಡ ಈ ಚಳವಳಿ ಲಕ್ಷಾಂತರ ವಿದ್ಯಾರ್ಥಿಗಳಿಗೆ ಜೀವನ ಮೌಲ್ಯಗಳನ್ನು ಕಲಿಸುವ ಪ್ರಮುಖ ವೇದಿಕೆಯಾಗಿ ರೂಪುಗೊಂಡಿದೆ ಎಂದು ತಿಳಿಸಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳು ವಿದ್ಯಾರ್ಥಿಗಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗುವುದರ ಜೊತೆಗೆ ಆತ್ಮವಿಶ್ವಾಸ, ಧೈರ್ಯ, ಸ್ವಾವಲಂಬನೆ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುತ್ತವೆ. ವಿದ್ಯಾರ್ಥಿಗಳು ಶೈಕ್ಷಣಿಕ ಸಾಧನೆಯೊಂದಿಗೆ ಸಮಾಜದ ಬಗ್ಗೆ ಕಾಳಜಿ ಹೊಂದುವುದು ಅತ್ಯಗತ್ಯ. ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ಭಾಗವಹಿಸುವುದರಿಂದ ಮುಂದಿನ ಶೈಕ್ಷಣಿಕ ಹಾಗೂ ವೃತ್ತಿಜೀವನದಲ್ಲಿಯೂ ವಿವಿಧ ಸೌಲಭ್ಯಗಳನ್ನು ಪಡೆಯಲು ಅವಕಾಶವಿದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಈ ಘಟಕಗಳಿಗೆ ಸೇರ್ಪಡೆಯಾಗಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ರಾಯಚೂರು ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಹಾಯಕ ಆಯುಕ್ತ ಬೀರಪ್ಪ ಶಂಭೋಜಿ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸ್ಕೌಟ್ಸ್ ಮತ್ತು ಗೈಡ್ಸ್ ಅತ್ಯಂತ ಪರಿಣಾಮಕಾರಿ ವೇದಿಕೆಯಾಗಿದೆ. ಶಾಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಹಿನ್ನೆಲೆಯಲ್ಲಿ ಇನ್ನಷ್ಟು ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳನ್ನು ಆರಂಭಿಸಿ ಹೆಚ್ಚಿನ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಬೇಕು ಎಂದು ಸಲಹೆ ನೀಡಿದರು.

ರಾಯಚೂರು ಜಿಲ್ಲೆ ಹಾಗೂ ಸಿಂಧನೂರು ತಾಲೂಕಿನಲ್ಲಿ ಕಳೆದ ಹಲವು ವರ್ಷಗಳಿಂದ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ತಾಲೂಕಿನ ವಿದ್ಯಾರ್ಥಿಗಳು ತಾಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಉತ್ತಮ ಸಾಧನೆ ಮಾಡುತ್ತಿದ್ದಾರೆ. ಸೇವೆ, ಶಿಸ್ತು, ಸಹಬಾಳ್ವೆ ಮತ್ತು ದೇಶಭಕ್ತಿಯಂತಹ ಮೌಲ್ಯಗಳನ್ನು ವಿದ್ಯಾರ್ಥಿ ಜೀವನದಲ್ಲಿಯೇ ರೂಢಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಚಳವಳಿಯ ಉಗಮ, ವಿಶ್ವಾದ್ಯಂತ ಅದರ ಬೆಳವಣಿಗೆ, ಭಾರತದಲ್ಲಿ ಚಳವಳಿ ನಡೆದು ಬಂದ ಹಾದಿ ಹಾಗೂ ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣದಲ್ಲಿ ಅದರ ಪಾತ್ರದ ಕುರಿತು ವಿವರಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ವೀರೇಶ ಗೋನವಾರ ಮಾತನಾಡಿ, ಸ್ಕೌಟ್ಸ್ ಮತ್ತು ಗೈಡ್ ್ಸ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಸಮಾಜಮುಖಿ ಚಿಂತನೆ ಹಾಗೂ ಜೀವನ ಕೌಶಲ್ಯಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಇತರರಿಗೆ ಸಹಾಯ ಮಾಡುವ ಗುಣ, ಸಂಕಷ್ಟದ ಸಂದರ್ಭದಲ್ಲಿ ಸ್ಪಂದಿಸುವ ಮನೋಭಾವ ಹಾಗೂ ತಂಡವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯವನ್ನು ಇಂತಹ ಚಟುವಟಿಕೆಗಳು ಕಲಿಸಿಕೊಡುತ್ತವೆ ಎಂದು ಅಭಿಪ್ರಾಯಪಟ್ಟರು.

ಸಮಾಜಸೇವೆಯಿಂದ ದೊರೆಯುವ ಆತ್ಮತೃಪ್ತಿ ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಗಟ್ಟಿಗೊಳಿಸುತ್ತದೆ. ಶಾಲೆಯ ವಿದ್ಯಾರ್ಥಿಗಳು ಸ್ಕೌಟ್ ್ಸ ಮತ್ತು ಗೈಡ್ಸ್ ಘಟಕಗಳಿಗೆ ಸೇರ್ಪಡೆಯಾಗಲು ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ. ಶಿಕ್ಷಕರು ಹಾಗೂ ಪಾಲಕರ ಸಹಕಾರದೊಂದಿಗೆ ಮುಂದಿನ ದಿನಗಳಲ್ಲಿ ಇನ್ನಷ್ಟು ಘಟಕಗಳನ್ನು ಆರಂಭಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಶಾಲೆಯ ಸ್ಕೌಟ್ ಮಾಸ್ಟರ್ ಜಡೇಶ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳ ಉದ್ದೇಶ ಹಾಗೂ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾ ಪಬ್ಲಿಕ್ ಶಾಲೆಯ ಗೈಡ್ ಆರತಿ, ಶಾಲೆಯ ಶಿಕ್ಷಕರಾದ ಭೀಮರೆಡ್ಡಿ, ಬಸವರಾಜ, ಮೌನೇಶಪ್ಪ, ಮಲ್ಲಪ್ಪ ಕೆ., ಮೌನೇಶ, ಉಮೇಶ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಭೋವಿ ಅಭಿವೃದ್ಧಿ ನಿಗಮದಲ್ಲಿ ₹19 ಕೋಟಿ ಅವ್ಯವಹಾರ ಆರೋಪ: ತನಿಖೆಗೆ ಆಗ್ರಹ



ರಾಯಚೂರು, ನ. 7: ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಭೂ ಒಡೆತನ ಯೋಜನೆಯಡಿ ರಾಯಚೂರು ಜಿಲ್ಲೆಯ ಮಾನ್ವಿ, ಸಿರವಾರ ಹಾಗೂ ಸಿಂಧನೂರು ತಾಲೂಕುಗಳಲ್ಲಿ ಸುಮಾರು ₹19 ಕೋಟಿ ಅವ್ಯವಹಾರ ನಡೆದಿದೆ ಎಂದು ಕರ್ನಾಟಕ ರಾಜ್ಯ ಭೋವಿ-ವಡ್ಡರ ಸಮಾಜದ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಬಿ.ಕೆ. ಜಯಶ್ರೀ ಆರೋಪಿಸಿದರು.

ಈ ಸಂಬಂಧ ಸಮಾಜದ ಪದಾಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಅವರು, ಬಡ ಹಾಗೂ ಭೂರಹಿತ ಕುಟುಂಬಗಳಿಗೆ ಫಲವತ್ತಾದ ಕೃಷಿ ಜಮೀನು ಒದಗಿಸುವ ಉದ್ದೇಶದ ಯೋಜನೆಯಲ್ಲಿ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳು ಶಾಮೀಲಾಗಿ ಸರ್ಕಾರದ ಅನುದಾನ ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ದೂರಿದರು.

ಯೋಜನೆಯಡಿ ಕೃಷಿಗೆ ಯೋಗ್ಯವಾದ ಜಮೀನುಗಳ ಬದಲು ಸವಳು ಭೂಮಿ ಹಾಗೂ ಜಾಲಿ ಗಿಡಗಳಿಂದ ಕೂಡಿದ ಅನುಪಯುಕ್ತ ಜಮೀನುಗಳನ್ನು ಖರೀದಿಸಲಾಗಿದೆ. 2023-24ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯು 42 ಎಕರೆ ಭೂಮಿ ಖರೀದಿಗೆ ಮಾತ್ರ ಅನುಮೋದನೆ ನೀಡಿತ್ತು. ಆದರೆ ನಂತರ ಸಮಿತಿಯ ಅನುಮೋದನೆಯಿಲ್ಲದೆ, ಕಂದಾಯ ಮತ್ತು ನೀರಾವರಿ ಅಧಿಕಾರಿಗಳ ಸ್ಥಳ ಪರಿಶೀಲನೆಯನ್ನೂ ನಡೆಸದೆ ಭೂಮಿ ಖರೀದಿಸಲಾಗಿದೆ ಎಂದು ಆರೋಪಿಸಿದರು.

ಸುಮಾರು ₹4.50 ಲಕ್ಷ ಮೌಲ್ಯದ ಜಮೀನನ್ನು ದಾಖಲೆಗಳಲ್ಲಿ ₹12.50 ಲಕ್ಷ ಎಂದು ತೋರಿಸಿ ಹಣ ದುರುಪಯೋಗಪಡಿಸಿಕೊಳ್ಳಲಾಗಿದೆ. ಅಲ್ಲದೆ, 48 ಫಲಾನುಭವಿಗಳಿಂದ ಮಧ್ಯವರ್ತಿಗಳು ಹಣ ವಸೂಲಿ ಮಾಡಿದ್ದು, ಸಾಲ ಮಂಜೂರಾತಿಗೂ ಕಮಿಷನ್ ಪಡೆದಿದ್ದಾರೆ. ಕೆಲವು ಫಲಾನುಭವಿಗಳ ಹೆಸರಿನಲ್ಲಿ ಜಮೀನು ನೋಂದಣಿಯಾಗಿದ್ದರೂ ವಾಸ್ತವದಲ್ಲಿ ಭೂಮಿ ಹಸ್ತಾಂತರವಾಗಿಲ್ಲ ಎಂದು ದೂರಿದರು.

ಪ್ರಕರಣದ ಕುರಿತು ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಅಗತ್ಯವಿದ್ದರೆ ಸಿಬಿಐ ತನಿಖೆಗೆ ಶಿಫಾರಸು ಮಾಡಬೇಕು. ಆರೋಪ ಎದುರಿಸುತ್ತಿರುವ ನಿಗಮದ ಜಿಲ್ಲಾ ವ್ಯವಸ್ಥಾಪಕ ರವಿ ಎಂ. ಅವರನ್ನು ಅಮಾನತುಗೊಳಿಸಿ, ಭೂ ಖರೀದಿ ಹಾಗೂ ಸಾಲ ಮಂಜೂರಾತಿಗೆ ಸಂಬಂಧಿಸಿದ ದಾಖಲೆಗಳನ್ನು ವಶಕ್ಕೆ ಪಡೆಯಬೇಕು ಎಂದು ಆಗ್ರಹಿಸಿದರು.

ಅವ್ಯವಹಾರ ಸಾಬೀತಾದರೆ ತಪ್ಪಿತಸ್ಥರಿಂದ ಹಣ ವಸೂಲಿ ಮಾಡಬೇಕು. ಸಂತ್ರಸ್ತ ಫಲಾನುಭವಿಗಳಿಗೆ ನೀರಾವರಿ, ವಿದ್ಯುತ್ ಹಾಗೂ ರಸ್ತೆ ಸೌಲಭ್ಯವಿರುವ ಫಲವತ್ತಾದ ಕೃಷಿ ಜಮೀನು ಒದಗಿಸಿ ನ್ಯಾಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ವಿ.ಎಸ್. ಯಲ್ಲಪ್ಪ, ರಾಜ್ಯ ಪ್ರಧಾನ ಕಾರ್ಯದರ್ಶಿ ದೇವೇಂದ್ರ ಬಿಚ್ಚಾಲಿ, ತಾಲೂಕು ಅಧ್ಯಕ್ಷ ಮಲ್ಲೇಶ್ ಚಂದ್ರಬಂಡಾ, ಪ್ರಧಾನ ಕಾರ್ಯದರ್ಶಿ ಡಬ್ಲ್ಯೂ. ಈರೇಶ ಗಾಣಧಾಳ, ರಾಜ್ಯ ಸಮಿತಿ ಸದಸ್ಯ ವಿ. ಗೋವಿಂದು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಸ್ವಯಂ ಸೇವಕ ಗೃಹರಕ್ಷಕ (ಪುರುಷ ಹಾಗೂ ಮಹಿಳಾ) ಸದಸ್ಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

ರಾಯಚೂರು. ನ.7.(ಕರ್ನಾಟಕ ವಾರ್ತೆ):-ರಾಯಚೂರು ಜಿಲ್ಲೆಯ ಗೃಹರಕ್ಷಕ ದಳದ ತಾಲೂಕು ಹಾಗೂ ಉಪ ಘಟಕಗಳಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ ಒಟ್ಟು 54 ಸ್ವಯಂ ಸೇವಕ ಗೃಹರಕ್ಷಕ (ಪುರುಷ ಹಾಗೂ ಮಹಿಳಾ) ಸದಸ್ಯರ ಹುದ್ದೆಗಳಿಗೆ ಅರ್ಹ ಹಾಗೂ ಸ್ವಯಂ ಸೇವಾ ಮನೋಭಾವ ಹೊಂದಿರುವ ಸ್ಥಳೀಯ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹತೆಗಳು ಅಭ್ಯರ್ಥಿಗಳು ರಾಯಚೂರು ಜಿಲ್ಲಾ ವ್ಯಾಪ್ತಿಗೆ ಒಳಪಡಬೇಕು ಹಾಗೂ ಆಯಾ ಘಟಕದ ವ್ಯಾಪ್ತಿಗೆ ಹತ್ತಿರದ ನಿವಾಸಿಗಳಾಗಿರಬೇಕು. ವಯೋಮಿತಿಯು ಕನಿಷ್ಠ 19 ರಿಂದ 50 ವರ್ಷದೊಳಗಿರಬೇಕು. ಅಭ್ಯರ್ಥಿಗಳು ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು. ದೃಢಕಾಯರಾಗಿ, ಆರೋಗ್ಯವಂತರಾಗಿರಬೇಕು ಹಾಗೂ ಗೃಹರಕ್ಷಕ ನಿಯಮಗಳ ವ್ಯಾಪ್ತಿಗೆ ಒಳಪಟ್ಟಿರಬೇಕು.

ಅರ್ಜಿ ವಿತರಣೆ ಹಾಗೂ ಸಲ್ಲಿಕೆ ವಿವರ: ಆಸಕ್ತ ಅಭ್ಯರ್ಥಿಗಳು ಸ್ವತಃ ತಾವೇ 10ನೇ ತರಗತಿ ಅಂಕಪಟ್ಟಿಯನ್ನು ತೋರಿಸಿ, ಜಿಲ್ಲಾ ಗೃಹರಕ್ಷಕ ದಳ ಕಚೇರಿಯಲ್ಲಿ ದಿನಾಂಕ: 06.ನವೆಂಬ.ೞ2026 ರಿಂದ 13.ನವೆಂಬ.ೞ2026 ರವರೆಗೆ ಪ್ರತಿದಿನ ಬೆಳಿಗ್ಗೆ 11:00 ಗಂಟೆಯಿದ ಮಧ್ಯಾಹ್ನ 1:30 ಗಂಟೆಯವರೆಗೆ (ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ) ಅರ್ಜಿಗಳನ್ನು ಪಡೆದುಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಜನ್ಮ ದಿನಾಂಕದ ದೃಢೀಕರಣ ಪತ್ರ, ವಿದ್ಯಾರ್ಹತೆ ದೃಢೀಕರಣ ದಾಖಲೆ, ಆಧಾರ್ ಕಾರ್ಡ್, ಮೊಬೈಲ್ ಸಂಖ್ಯೆ ಹಾಗೂ ಇತ್ತೀಚಿನ 2 ಭಾವಚಿತ್ರಗಳೊಂದಿಗೆ ದಿನಾಂಕ: 16.ನವೆಂಬ.ೞ2026 ರಿಂದ 30.ನವೆಂಬ.ೞ2026 ರೊಳಗಾಗಿ ಜಿಲ್ಲಾ ಕಚೇರಿಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕ 30.ನವೆಂಬ.ೞ2026 ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ವಿಶೇಷ ಸೂಚನೆ: ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಆಯ್ಕೆ ಖಚಿತವಿರುವುದಿಲ್ಲ. ಆಯ್ಕೆ ಸಮಿತಿಯ ಪರೀಕ್ಷೆ ಹಾಗೂ ತೀರ್ಮಾನವೇ ಅಂತಿಮವಾಗಿರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು ಒಂದು ವಾರದೊಳಗೆ ವೈದ್ಯಕೀಯ ಪ್ರಮಾಣಪತ್ರ ಸಲ್ಲಿಸಬೇಕು. ಗೃಹರಕ್ಷಕ ಸದಸ್ಯತ್ವವು ಸಂಪೂರ್ಣವಾಗಿ ಸ್ವಯಂ ಸೇವೆಯ ಹುದ್ದೆಯಾಗಿದ್ದು, ಇದು ಖಾಯಂ ಹುದ್ದೆಯಾಗಿರುವುದಿಲ್ಲ. ಸರ್ಕಾರದ ಆದೇಶದಂತೆ ಕರ್ತವ್ಯ ನಿರ್ವಹಿಸಿದ ದಿನಗಳಿಗೆ ಮಾತ್ರ ಭತ್ಯೆ ಪಾವತಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಮಾದೇಷ್ಟರು, ಜಿಲ್ಲಾ ಗೃಹರಕ್ಷಕದಳ ಕಾರ್ಯಾಲಯ, ಪ್ರಥಮ ದರ್ಜೆ ಕಾಲೇಜು ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು-584101 ಅಥವಾ ದೂರವಾಣಿ ಸಂಖ್ಯೆ: 08532-221679 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಗೃಹರಕ್ಷಕದಳದ ಸಮಾದೇಷ್ಟರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಾರೋಗ್ಯ ಪೀಡಿತ ರಂಗನಾಥ ಕೋರಿಶೆಟ್ಟಿಗೆ ಕಾರುಣ್ಯ ಆಶ್ರಮದಲ್ಲಿ ಆಶ್ರಯ



ಸಿಂಧನೂರು: ಅನಾರೋಗ್ಯದಿಂದ ಬಳಲುತ್ತಿದ್ದ, ಕುಟುಂಬದವರಿಂದ ಸೂಕ್ತ ಆರೈಕೆ ದೊರೆಯದೆ ಸಂಕಷ್ಟಕ್ಕೆ ಸಿಲುಕಿದ್ದ ರಾಯಚೂರು ನಗರದ ಎನ್‌ಜಿಒ ಕಾಲೋನಿ ನಿವಾಸಿ ರಂಗನಾಥ ಕೋರಿಶೆಟ್ಟಿ (55) ಅವರಿಗೆ ಸಿಂಧನೂರಿನ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಶ್ರಯ ಕಲ್ಪಿಸುವ ಮೂಲಕ ಮಾನವೀಯತೆ ಮೆರೆಯಲಾಗಿದೆ.

ರಾಯಚೂರು ನಗರದ ನೇತಾಜಿ ಪೊಲೀಸ್ ಠಾಣೆ ವ್ಯಾಪ್ತಿಯ ಎನ್‌ಜಿಒ ಕಾಲೋನಿಯಲ್ಲಿ ವಾಸವಾಗಿದ್ದ ರಂಗನಾಥ ಕೋರಿಶೆಟ್ಟಿ ಅವರು ಹಲವು ವರ್ಷಗಳಿಂದ ವಿವಿಧ ಸಾಮಾಜಿಕ ಹಾಗೂ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಸಮಾಜಮುಖಿ ಕಾರ್ಯಗಳಿಗೆ ತಮ್ಮ ಕೈಲಾದ ಸಹಾಯ ಮಾಡುತ್ತಾ, ದಾನಧರ್ಮದ ಮೂಲಕ ಸ್ಥಳೀಯರ ಮೆಚ್ಚುಗೆಗೆ ಪಾತ್ರರಾಗಿದ್ದರು. ಆದರೆ ಇತ್ತೀಚೆಗೆ ಅನಾರೋಗ್ಯಕ್ಕೆ ತುತ್ತಾದ ಅವರು ಸೂಕ್ತ ಆರೈಕೆಯಿಲ್ಲದೆ ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದ್ದರು ಎನ್ನಲಾಗಿದೆ.

ಅವರ ಪರಿಸ್ಥಿತಿಯನ್ನು ಗಮನಿಸಿದ ಸ್ಥಳೀಯ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಪದಾಧಿಕಾರಿಗಳು, ಎನ್‌ಜಿಒ ಕಾಲೋನಿಯ ನಿವಾಸಿಗಳು ಹಾಗೂ ನೇತಾಜಿ ಪೊಲೀಸ್ ಠಾಣೆಯ ಅಧಿಕಾರಿಗಳು ಮಾನವೀಯ ನೆಲೆಯಲ್ಲಿ ನೆರವಿಗೆ ಮುಂದಾದರು.

ರಂಗನಾಥ ಅವರ ಆರೋಗ್ಯ ಸ್ಥಿತಿ ಹಾಗೂ ಆಶ್ರಯದ ಅಗತ್ಯವನ್ನು ಮನಗಂಡು ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀ ಮಠ ಸೇವಾ ಟ್ರಸ್ಟ್ (ರಿ.), ಹರೇಟನೂರು ವತಿಯಿಂದ ನಡೆಸಲಾಗುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ಬುದ್ಧಿಮಾಂದ್ಯ ಆಶ್ರಮವನ್ನು ಸಂಪರ್ಕಿಸಲಾಯಿತು.

ವಿಷಯ ತಿಳಿದ ಆಶ್ರಮದ ಕಾರ್ಯಾಧ್ಯಕ್ಷ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರು ರಂಗನಾಥ ಅವರಿಗೆ ಆಶ್ರಯ ನೀಡಲು ಸಮ್ಮತಿಸಿದರು. ಬಳಿಕ ಟ್ರಸ್ಟ್ ಪದಾಧಿಕಾರಿಗಳು, ಸ್ಥಳೀಯರು ಹಾಗೂ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ರಂಗನಾಥ ಅವರನ್ನು ಆಶ್ರಮಕ್ಕೆ ಕರೆತಂದು ಆಶ್ರಯ ಕಲ್ಪಿಸಲಾಯಿತು.

ಈ ಸಂದರ್ಭದಲ್ಲಿ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಕಾರ್ಯದರ್ಶಿ ಬಸವರಾಜ ಪಡಶೆಟ್ಟಿ ಮಾತನಾಡಿ, ರಂಗನಾಥ ಕೋರಿಶೆಟ್ಟಿ ಅವರು ಸಮಾಜಸೇವೆಗೆ ಸದಾ ಮುಂಚೂಣಿಯಲ್ಲಿದ್ದ ವ್ಯಕ್ತಿ. ಅನೇಕ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ಆರ್ಥಿಕ ಹಾಗೂ ಇತರ ರೀತಿಯ ನೆರವು ನೀಡುತ್ತಿದ್ದರು. ಇತರರ ಸಂಕಷ್ಟಗಳಿಗೆ ಸ್ಪಂದಿಸುತ್ತಿದ್ದ ಇಂತಹ ವ್ಯಕ್ತಿಯೇ ಇಂದು ಅನಾರೋಗ್ಯದಿಂದ ಅಸಹಾಯಕ ಸ್ಥಿತಿಗೆ ತಲುಪಿರುವುದು ನೋವಿನ ಸಂಗತಿ ಎಂದು ವಿಷಾದ ವ್ಯಕ್ತಪಡಿಸಿದರು.

ರಂಗನಾಥ ಅವರ ಅನಾರೋಗ್ಯದ ಸ್ಥಿತಿ ಕುರಿತು ಪೊಲೀಸ್ ಇಲಾಖೆಯ ಅಧಿಕಾರಿಗಳು ಅವರ ಪತ್ನಿ ಹಾಗೂ ಮಕ್ಕಳ ಗಮನಕ್ಕೆ ತಂದಿದ್ದರೂ ಕುಟುಂಬದವರಿಂದ ನಿರೀಕ್ಷಿತ ಸ್ಪಂದನೆ ದೊರೆತಿಲ್ಲ ಎಂದು ಅವರು ತಿಳಿಸಿದರು.

ಇಂತಹ ಸಂದರ್ಭದಲ್ಲಿ ಸಿಂಧನೂರಿನ ಕಾರುಣ್ಯ ಆಶ್ರಮವನ್ನು ಸಂಪರ್ಕಿಸಿ ಪರಿಸ್ಥಿತಿಯನ್ನು ವಿವರಿಸಿದಾಗ ಆಶ್ರಮದ ಆಡಳಿತ ಮಂಡಳಿಯವರು ಯಾವುದೇ ಹಿಂಜರಿಕೆಯಿಲ್ಲದೆ ಆಶ್ರಯ ನೀಡಲು ಒಪ್ಪಿಕೊಂಡಿರುವುದು ಶ್ಲಾಘನೀಯ. ಸಂಕಷ್ಟದಲ್ಲಿರುವವರಿಗೆ ಆಶ್ರಯ ನೀಡುವುದರ ಮೂಲಕ ಕಾರುಣ್ಯ ಆಶ್ರಮ ನಿಜವಾದ ಮಾನವೀಯ ಸೇವೆಗೆ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರು ದಾನಿಗಳ ಸಹಾಯ ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಆಶ್ರಮವನ್ನು ನಡೆಸುತ್ತಾ ಅನಾಥರು, ನಿರ್ಗತಿಕರು, ವೃದ್ಧರು ಹಾಗೂ ಆರೈಕೆಯ ಅಗತ್ಯವಿರುವವರಿಗೆ ನೆರವಾಗುತ್ತಿರುವುದು ಸಮಾಜಕ್ಕೆ ಪ್ರೇರಣೆಯಾಗಿದೆ. ಇಂತಹ ಸೇವಾ ಸಂಸ್ಥೆಗಳಿಗೆ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಬೆಂಬಲ ನೀಡುವುದು ಅಗತ್ಯವಾಗಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಕಾರುಣ್ಯ ಆಶ್ರಮದ ಸಮಾಜಮುಖಿ ಸೇವಾ ಕಾರ್ಯಗಳಿಗೆ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಹಾಗೂ ಎನ್‌ಜಿಒ ಕಾಲೋನಿಯ ನಿವಾಸಿಗಳ ವತಿಯಿಂದ ಸಾಧ್ಯವಾದಷ್ಟು ಸಹಾಯ ಮತ್ತು ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಆಶ್ರಮದ ಕಾರ್ಯಾಧ್ಯಕ್ಷ ಡಾ. ಚನ್ನಬಸವ ಸ್ವಾಮಿ ಹಿರೇಮಠ ಹಾಗೂ ಸಿಬ್ಬಂದಿ ರಂಗನಾಥ ಅವರನ್ನು ಸ್ವಾಗತಿಸಿ, ಆಶ್ರಮದಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಕಲ್ಪಿಸಿದರು.

ಈ ಸಂದರ್ಭದಲ್ಲಿ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಅಧ್ಯಕ್ಷ ಮಹಾಂತೇಶ ಪೂರತಿಪ್ಲಿ, ಕಾರ್ಯದರ್ಶಿ ಬಸವರಾಜ ಪಡಶೆಟ್ಟಿ, ಸುರೇಶ ಕೋರಿಶೆಟ್ಟಿ, ರಾಯಚೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ದ್ವಿತೀಯ ದರ್ಜೆ ಸಹಾಯಕಿ ಶೈಲಜಾ ಕುಲಕರ್ಣಿ, ನಿವೃತ್ತ ಜಮಾದಾರ ಬಸವರಾಜ, ನೇತಾಜಿ ಪೊಲೀಸ್ ಠಾಣೆಯ ಮಹಿಳಾ ಪೊಲೀಸ್ ಸಿಬ್ಬಂದಿ ಮಂಜುಳಾ, ಆಶ್ರಮದ ಕಾರ್ಯಾಧ್ಯಕ್ಷ ಡಾ. ಚನ್ನಬಸವ ಸ್ವಾಮಿ ಹಿರೇಮಠ, ಸಿಬ್ಬಂದಿಗಳಾದ ಮರಿಯಪ್ಪ, ಹರ್ಷವರ್ಧನ ಸೇರಿದಂತೆ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಪದಾಧಿಕಾರಿಗಳು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ರಾಮಣ್ಣ ಹವಳೆ ಅವರಿಗೆ ಗೌರವ ಸನ್ಮಾನ



ರಾಯಚೂರು: ರಾಯಚೂರು ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಹಿರಿಯ ಸಾಹಿತಿ, ಲೇಖಕ, ಸಂಶೋಧಕ ಹಾಗೂ ನಾಟಕಕಾರ ರಾಮಣ್ಣ ಹವಳೆ ಅವರನ್ನು ಸಾಹಿತ್ಯಾಭಿಮಾನಿಗಳು, ಶಿಕ್ಷಕರು ಹಾಗೂ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಅವರ ನಿವಾಸಕ್ಕೆ ಭೇಟಿ ನೀಡಿ ಆತ್ಮೀಯವಾಗಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾನ್ವಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಮೂಕಪ್ಪ ಕಟ್ಟಿಮನಿ ಮಾತನಾಡಿ, ರಾಮಣ್ಣ ಹವಳೆ ಅವರು ಕನ್ನಡ ಸಾಹಿತ್ಯ, ಸಂಶೋಧನೆ ಹಾಗೂ ನಾಟಕ ಕ್ಷೇತ್ರಗಳಲ್ಲಿ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡುವ ಮೂಲಕ ಸಾಹಿತ್ಯ ಲೋಕದಲ್ಲಿ ಗುರುತಿಸಿಕೊಂಡಿದ್ದಾರೆ. ಅವರ ಸುದೀರ್ಘ ಸಾಹಿತ್ಯ ಸೇವೆ, ಸಂಶೋಧನಾ ಮನೋಭಾವ ಹಾಗೂ ಸೃಜನಶೀಲ ಬರವಣಿಗೆ ಕನ್ನಡ ಸಾಹಿತ್ಯದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕನ್ನಡ ಭಾಷೆ, ಸಾಹಿತ್ಯ ಹಾಗೂ ಸಂಸ್ಕೃತಿಯ ಬಗ್ಗೆ ಅಪಾರ ಕಾಳಜಿ ಹೊಂದಿರುವ ರಾಮಣ್ಣ ಹವಳೆ ಅವರು ತಮ್ಮ ಸಾಹಿತ್ಯಿಕ ಚಟುವಟಿಕೆಗಳ ಮೂಲಕ ಓದುಗರಲ್ಲಿ ಸಾಹಿತ್ಯಾಸಕ್ತಿ ಬೆಳೆಸುವ ಕೆಲಸ ಮಾಡಿದ್ದಾರೆ. ಅವರಂತಹ ಅನುಭವಿ ಹಾಗೂ ಹಿರಿಯ ಸಾಹಿತಿಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದು ಜಿಲ್ಲೆಯ ಸಾಹಿತ್ಯ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಸಾಹಿತ್ಯ ಸಮ್ಮೇಳನಗಳು ಕೇವಲ ಸಾಹಿತಿಗಳ ಸಮಾಗಮಕ್ಕೆ ಸೀಮಿತವಾಗದೆ ಕನ್ನಡ ಭಾಷೆ, ನಾಡಿನ ಸಂಸ್ಕೃತಿ, ಸಾಮಾಜಿಕ ಚಿಂತನೆ ಹಾಗೂ ಸಾಹಿತ್ಯದ ಬೆಳವಣಿಗೆಗೆ ವೇದಿಕೆಯಾಗಬೇಕು. ಹಿರಿಯ ಸಾಹಿತಿಗಳ ಅನುಭವ ಮತ್ತು ಮಾರ್ಗದರ್ಶನ ಯುವ ಬರಹಗಾರರಿಗೆ ಪ್ರೇರಣೆಯಾಗಬೇಕು. ಈ ನಿಟ್ಟಿನಲ್ಲಿ ರಾಮಣ್ಣ ಹವಳೆ ಅವರ ಸರ್ವಾಧ್ಯಕ್ಷತೆಯಲ್ಲಿ ನಡೆಯಲಿರುವ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಅರ್ಥಪೂರ್ಣವಾಗಿ ಯಶಸ್ವಿಯಾಗಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಮಾನ್ವಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ನಿವೃತ್ತ ಮುಖ್ಯ ಶಿಕ್ಷಕರಾದ ನಂದೀಶ್ ಬಂಡಿ, ಹನುಮಂತಪ್ಪ ಟಿ., ಯಮನಪ್ಪ, ಸಾಹಿತಿಗಳಾದ ತಾಯಪ್ಪ ಮರ್ಚಟ್ಹಾಳ್, ಮಹಾಂತೇಶ ಬಿರಾದಾರ, ದೈಹಿಕ ಶಿಕ್ಷಣ ಸಂಘದ ಅಧ್ಯಕ್ಷ ಯಂಕಪ್ಪ ಪಿರಂಗಿ, ಜಿ. ತಿಮ್ಮಾಪುರ ಶಾಲೆಯ ಮುಖ್ಯ ಶಿಕ್ಷಕ ಚಂದ್ರಪ್ಪ ಸೇರಿದಂತೆ ಶಿಕ್ಷಕರು, ಸಾಹಿತಿಗಳು ಹಾಗೂ ಸಾಹಿತ್ಯಾಭಿಮಾನಿಗಳು ಉಪಸ್ಥಿತರಿದ್ದರು.

ಪಟಾಕಿ ತಯಾರಿಕೆ ಹಾಗೂ ಮಾರಾಟ ಮಳಿಗೆಗಳಲ್ಲಿ 18 ವರ್ಷದೊಳಗಿನ

ಮಕ್ಕಳ ಬಳಕೆ ನಿಷೇಧ: ರಾಯಚೂರು ಕಾರ್ಮಿಕ ಇಲಾಖೆ ಎಚ್ಚರಿಕೆ

ರಾಯಚೂರು. ನವೆಂಬ.ೞ7.(ಕರ್ನಾಟಕ ವಾರ್ತೆ):-ಬೆಳಕಿನ ಹಬ್ಬ ದೀಪಾವಳಿಯ ಪ್ರಯುಕ್ತ ರಾಯಚೂರು ಜಿಲ್ಲೆ ಹಾಗೂ ವಿವಿಧ ತಾಲೂಕು ಕೇಂದ್ರಗಳಲ್ಲಿ ಸ್ಥಾಪಿಸಲಾಗುತ್ತಿರುವ ಪಟಾಕಿ ಮಾರಾಟ ಮಳಿಗೆಗಳಲ್ಲಿ ಪಟಾಕಿ ತಯಾರಿಕೆ, ಮಾರಾಟ ಹಾಗೂ ಇತರ ಯಾವುದೇ ಪ್ರಕ್ರಿಯೆಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ರಾಯಚೂರು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಕಾರ್ಮಿಕ ಅಧಿಕಾರಿಗಳಾದ ಆರತಿ ಅವರು ತಿಳಿಸಿದ್ದಾರೆ.

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016 ರ ಪ್ರಕಾರ, 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕ್ಷೇತ್ರಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಜೊತೆಗೆ, 18 ವರ್ಷದೊಳಗಿನ ಕಿಶೋರರನ್ನು ಪಟಾಕಿ ತಯಾರಿಕೆ ಮತ್ತು ಮಾರಾಟ ಸೇರಿದಂತೆ ಯಾವುದೇ ರೀತಿಯ ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಕಾಯ್ದೆಯನ್ವಯ ಶಿಕ್ಷಾರ್ಹ ಅಪರಾಧವಾಗಿದೆ.

ಒಂದು ವೇಳೆ ಜಿಲ್ಲೆಯ ಯಾವುದೇ ಪಟಾಕಿ ಮಳಿಗೆಗಳಲ್ಲಿ ಅಥವಾ ತಯಾರಿಕಾ ಘಟಕಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಂಡಿರುವುದು ಕಂಡುಬಂದಲ್ಲಿ, ಸಂಬಧಪಟ್ಟ ಮಾಲೀಕರ ವಿರುದ್ಧ ಬಾಲಕಾರ್ಮಿಕ ಕಾಯ್ದೆಯಡಿ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿ ಎಚ್ಚರಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K